ಹೆಚ್ಚಿನ ಸುದ್ದಿ ಪುಟ 13

ಗರಿಷ್ಠ 32°C | ಕನಿಷ್ಠ 22°C

ಸುದ್ದಿ ಸಿಂಚನ

ಅನಧಿಕೃತ ಹೋಂಸ್ಟೇ, ರೆಸಾರ್ಟ್‌ ವಿರುದ್ಧ ಕ್ರಮ

ಚಿಕ್ಕಬಳ್ಳಾಪುರ: ಜಿಲ್ಲಾ ವ್ಯಾಪ್ತಿಯಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಯಾವುದೇ ಅಧಿಕೃತ ಅಥವಾ ಅನುಮೋದನೆ ಪಡೆಯದೇ ಇರುವ ಹೋಂಸ್ಟೇಗಳು ಹಾಗೂ ರೆಸಾರ್ಟ್‌ಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಾಗುವುದು ಎಂದು ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಎಚ್ಚರಿಕೆ ನೀಡಿದ್ದಾರೆ. ಸದರಿ ಹೋಂಸ್ಟೇ ಹಾಗೂ ರೆಸಾಟ್‌ಗಳನ್ನು ಕಾನೂನು ಬದ್ಧವಾಗಿ ಮುಂದುವರಿಸಲು ಆಸಕ್ತಿ ಇರುವ ಮಾಲೀಕರು, ಅಗತ್ಯ ದಾಖಲೆಗಳೊಂದಿಗೆ ಜಿಲ್ಲಾ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ ಸಂಪರ್ಕಿಸಿ ನೋಂದಣಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಸೂಚಿಸಲಾಗಿದೆ. ತಪ್ಪಿದಲ್ಲಿ ಅಂತಹ ಮಾಲೀಕರ ವಿರುದ್ಧ ಕಟ್ಟುನಿಟ್ಟಿನ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವೃತ್ತಿ ಮಾರ್ಗದರ್ಶನ ತರಬೇತಿಗೆ ಅರ್ಜಿ ಆಹ್ವಾನ

ಚಿಕ್ಕಬಳ್ಳಾಪುರ: ಭಾರತೀಯ ಸೇನೆ/ಇತರ ಯೂನಿಫಾರ್ಮ್ ಸೇವೆಗಳಿಗೆ ಸೇರ ಬಯಸುವ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಹಾಗೂ 3(ಬಿ) ಗಳ ಅರ್ಹ ಅಭ್ಯರ್ಥಿಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ವೀರ ಬಹದ್ದೂರ ಪುಂಜಾ ನಾಯ್ಕ ಸೇನಾ ಆಯ್ಕೆ ಪೂರ್ವ ತರಬೇತಿ ಶಾಲೆ ಮಾಜಾಳಿ, ಕಾರವಾರದಲ್ಲಿ ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿಯನ್ನು ಉಚಿತವಾಗಿ ನೀಡುತ್ತಿದ್ದು, 2026-27ನೇ ಸಾಲಿನ 1ನೇ ತಂಡದ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ (ಬಾಲಕರು ಮಾತ್ರ) ಅರ್ಜಿ ಆಹ್ವಾನಿಸಲಾಗಿದೆ. ಇದೇ ಮೇ 28 ರವರೆಗೆ ಅರ್ಜಿ ಸಲ್ಲಿಸಬಹುದು. ಅಭ್ಯರ್ಥಿ 10ನೇ ತರಗತಿ ಉತ್ತೀರ್ಣರಾಗಿದ್ದು, ಪ್ರತಿ ವಿಷಯದಲ್ಲಿ ಕನಿಷ್ಠ 33 ಅಂಕ ಮತ್ತು ಸರಾಸರಿ ಶೇ. 45 ರಷ್ಟು ಅಂಕ ಪಡೆದಿರಬೇಕು. ಅಭ್ಯರ್ಥಿಗಳ ವಯೋಮಿತಿ 17 ರಿಂದ 20 ವರ್ಷದೊಳಗಿರಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08382-226588 ಗೆ ಸಂಪರ್ಕಿಸಬಹುದೆಂದುಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಕೆ.ವಿ.ಮುನಿರತ್ನಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಗ ನಾಣ್ಯ ಕದ್ದ ಬಳಿಕ ಮನೆಗೆ ಬೆಂಕಿ ಹಚ್ಚಿ ಪರಾರಿ

ಕೋಲಾರ: ತಾಲೂಕಿನ ನರಸಾಪುರ ಹೋಬಳಿಯ ಮಲ್ಲಸಂದ್ರದಲ್ಲಿ ಖದೀಮರು ಲಕ್ಷಾಂತರ ರು. ಮೌಲ್ಯದ ಚಿನ್ನ, ನಗದು ದೋಚಿ ನಂತರ ಮನೆಗೆ ಬೆಂಕಿ ಹಚ್ಚಿ ಪರಾರಿಯಾಗಿರುವ ಘಟನೆ ಗುರುವಾರ ತಡರಾತ್ರಿ ನಡೆದಿದೆ. ಮಲ್ಲಸಂದ್ರ ಶಾರದಮ್ಮರಿಗೆ ಸೇರಿದ ಮನೆಯಲ್ಲಿ ಈ ಕೃತ್ಯ ನಡೆದಿದ್ದು, ಜೀವನೋಪಾಯ ಕ್ಕಾಗಿ ಬೌಂಡ್ರಿ ಗೇಟ್‌ನಲ್ಲಿ ಟೀ ಅಂಗಡಿ ನಡೆಸುತ್ತಿದ್ದ ಈ ಬಡ ಕುಟುಂಬ ಇದೀಗ ಬೀದಿಗೆ ಬಿದ್ದಿದೆ. ಕಳ್ಳರು ಲಾಕರ್‌ಮುರಿದು ಅದರಲ್ಲಿದ್ದ ನಗದು, ಚಿನ್ನಾಭರಣ ಕದ್ದಿದ್ದಾರೆ. ಬಳಿಕ ಈ ಕಳ್ಳತನ ಬಗ್ಗೆ ಯಾರಿಗೂ ಅನು ಮಾನ ಬಾರದಂತೆ ಮನೆಗೆ ಬೆಂಕಿ ಹಚ್ಚಿ ಪರಾರಿಯಾಗಿ ದ್ದಾರೆ ಎನ್ನಲಾಗಿದೆ. ಬೆಂಕಿಯ ಕೆನ್ನಾಲಿಗೆಗೆ ದಿನಸಿ ಪದಾರ್ಥಗಳು ಹಾಗೂ ಅಗತ್ಯ ವಸ್ತುಗಳು ಸಂಪೂರ್ಣ ಸುಟ್ಟು ಭಸ್ಮವಾಗಿವೆ. ವೇಮಗಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪಟೇಲ್ ಸೊಣ್ಣೇಗೌಡ ನಿಧನ

ಕೋಲಾರ: ತಾಲೂಕಿನ ಅರಾಭಿಕೊತ್ತನೂರು ಗ್ರಾಮ ಪಂಚಾಯ್ತಿ ಮಾಜಿ ಅಧ್ಯಕ್ಷ ಪಟೇಲ್ ಸೊಣ್ಣೇಗೌಡ



(79) ವಯೋ ಸಹಜ ಕಾಯಿಲೆಯಿಂದ ನಿಧನರಾದರು. ಅವರಿಗೆ ಪತ್ನಿ ಜಯಮ್ಮ, ಮಕ್ಕಳಾದ ಅರವಿಂದ್, ರವಿಕುಮಾರ್, ವಿದ್ಯಾವತಿ, ಶ್ರೀಲಕ್ಷ್ಮಿ ಸೇರಿ ಸಹೋದರರು ಇದ್ದಾರೆ. ಅಂತ್ಯ ಸಂಸ್ಕಾರ ಅರಾಭಿಕೊತ್ತನೂರಿನಲ್ಲಿ ಶುಕ್ರವಾರ ಸಂಜೆ ನೆರವೇರಿತು. ಕೋಮುಲ್ ನಿರ್ದೇಶಕ ನಾಗರಾಜಪ್ಪ, ವಕ್ಕಲೇರಿ ಮಾರ್ಕೊಂಡಪ್ಪ, ಗ್ರಾಪಂ ಸದಸ್ಯ ನಂಜುಂಡೇಗೌಡ ಅಂತಿಮ ದರ್ಶನ ಪಡೆದರು.



ಬಂಗಾರಪೇಟೆ ತಾಲೂಕು ತ್ಯಾರನಹಳ್ಳಿಯಲ್ಲಿ ನೂತನ ಶ್ರೀ ಬಿರೇಶ್ವರ ಸ್ವಾಮಿಯ ವಿಗ್ರಹದ ಪುನರ್‌ಪ್ರಾಣ ಪ್ರತಿಷ್ಠಾನೆ ಕಾರ್ಯಕ್ರಮ ಸಂಭ್ರಮದಿಂದ ನಡೆಯಿತು. ಊಸರಳ್ಳಿ ಮಠದ ರೇವಣಾರಾಧ್ಯ ಸ್ವಾಮೀಜಿ, ಊರಿನ ಮುಖಂಡರು ಮತ್ತಿತರರು ಭಾಗವಹಿಸಿದ್ದರು.



ಕೋಲಾರ ತಾ.ವಕ್ಕಲೇರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ 35 ಲಕ್ಷ ರು. ವೆಚ್ಚದಲ್ಲಿ ಮಾದರಿ ಹೆರಿಗೆ ವಾರ್ಡ್ ನಿರ್ಮಾಣಕ್ಕೆ ಶಾಸಕ ಕೊತ್ತೂರು ಮಂಜುನಾಥ್ ಮಾರ್ಗದರ್ಶನದಲ್ಲಿ ಚಾಲನೆ ನೀಡಲಾಯಿತು. ಗ್ರಾಪಂ ಮಾಜಿ ಅಧ್ಯಕ್ಷ ಮೈಲಾಂಡಹಳ್ಳಿ ಮುರಳಿ, ಲೋಕೇಶ್, ಬೊಟ್ಟು ರಾಜಪ್ಪ ಮತ್ತಿತರರು ಇದ್ದರು.



ರೋಟರಿಯಿಂದ ಹಸುಗಳ ವಿತರಣೆ

ಕೋಲಾರ: ರೋಟರಿ ಸಂಸ್ಥೆ ಸಮಾಜ ಮುಖಿ ಕಾರ್ಯಗಳ ಮೂಲಕ ಮಹಿಳೆಯರ ಸಬಲೀಕರಣಕ್ಕೆ ತನ್ನದೇ ಆದ ಪಾತ್ರ ನೀಡುತ್ತಿದೆ ಎಂದು ರೋಟರಿ ಜಿಲ್ಲಾ ಪಾಲಕ ಬಿ.ಆರ್. ಶ್ರೀಧರ್‌ಹೇಳಿದರು. ತಾಲೂಕಿನ ಕಾಮದೇನಹಳ್ಳಿ ಸತ್ಯಮ್ಮ ದೇವಿ ದೇಗುಲದ ಆವರಣದಲ್ಲಿ ರೋಟರಿಯಿಂದ ಹಸುಗಳನ್ನು ನೊಂದ ಮಹಿಳೆಯರಿಗೆ ವಿತರಿಸಿ ಮಾತನಾಡಿದರು.ಆರ್ಥಿಕ ವಾಗಿ ಹಿಂದುಳಿದ ಮಹಿಳೆಯರು ಹಾಗೂ ವಿಧವೆಯ ರಿಗೆ ರೋಟರಿ ಸಂಸ್ಥೆಯಿಂದ ಹಸುಗಳನ್ನು ನೀಡುವ ಉದ್ದೇಶ ಆರ್ಥಿಕವಾಗಿ ಸಬಲರಾಗುವ ಮೂಲಕ ಸ್ವಾವಲಂಬಿ ಜೀವನ ರೂಪಿಸಿ ಕೊಳ್ಳಬಹುದು ಎಂದರು. ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಯದರ್ಶಿ ರವೀಂದ್ರನಾಥ್, ನಾರಾಯಣ, ಕೋಲಾರ ರೋಟರಿ ಸಂಸ್ಥೆಯ ಅಧ್ಯಕ್ಷ ಎಸ್.ಎಂ. ಚಂದ್ರಶೇಖರ್, ಕಾರ್ಯದರ್ಶಿ ಎಂ.ಪ್ರಭಾಕರ್, ಸದಸ್ಯರಾದ ಶ್ರೀನಿವಾಸ ರೆಡ್ಡಿ, ಜಿ. ನಾರಾಯಣಸ್ವಾಮಿ, ನಾಗೇಶ್ ಇದ್ದರು.

ಮೃತ್ಯುಕೂಪಗಳಾಗುತ್ತಿವೆ ರೈತರ ಕೃಷಿ ಹೊಂಡಗಳು!


ಹೊಂಡಗಳ ಸುತ್ತ ತಂತಿಬೇಲಿಯೇ ಇಲ್ಲ | ಮಕ್ಕಳ ಜತೆ ಜಾನುವಾರು ಸಾವು ಹೆಚ್ಚಳ | ಅಧಿಕಾರಿಗಳು, ಮಾಲೀಕರ ನಿರ್ಲಕ್ಷ್ಯಕ್ಕೆ ಆಕ್ರೋಶ

- **ಕೆ. ರಮೇಶ್ ಬಂಗಾರಪೇಟೆ**
- **ಕನ್ನಡಪ್ರಭ ವಾರ್ತೆ,** ಬಂಗಾರಪೇಟೆ

ಕೃಷಿ ಹೊಂಡಗಳು ರೈತರಿಗೆ ಜೀವ ಸೆಲೆಯಾಗುವ ಬದಲು ಮೃತ್ಯುಕೂಪವಾಗಿ ಮಾರ್ಪಟ್ಟಿದ್ದರೂ ಇಲಾಖೆ ಅಧಿಕಾರಿಗಳು ಇದನ್ನು ತಡೆಯಲು ಸಂಪೂರ್ಣ ವಿಫಲವಾಗಿದ್ದು ಸಾರ್ವಜನಿಕರ ಕೆಂಗಣ್ಣಿಗೆ ಗುರಿಯಾಗಿದೆ.

ಮಕ್ಕಳ ಜೀವ ನುಂಗುವ ಕೃಷಿ ಹೊಂಡಗಳ ಸುತ್ತಲೂ ಕಡ್ಡಾಯ ತಂತಿಬೇಲಿ ಅಳವಡಿಸಬೇಕೆಂದು ಸರ್ಕಾರ ಸೂಚಿಸಿದ್ದರೂ ಯಾವೊಬ್ಬರೂ ನಿಯಮಗಳನ್ನು ಪಾಲಿಸದೆ ಗಾಳಿಗೆ ತೂರಿರುವ ಮಾಲೀಕರ ವಿರುದ್ಧ ಕ್ರಮ ಕೈಗೊಳ್ಳುವಲ್ಲಿ ವಿಫಲವಾಗಿರುವ ಕೃಷಿ ಇಲಾಖೆ, ತಾಲೂಕು ಆಡಳಿತದ ವಿರುದ್ಧ ಕ್ರಮ ಕೈಗೊಳ್ಳಬೇಕೆಂಬ ಕೂಗು ಕೇಳಿ ಬರುತ್ತಿದೆ.

ಕೃಷಿ ಇಲಾಖೆಯ ಕೃಷಿ ಭಾಗ್ಯ ಯೋಜನೆಯಡಿ ನಿರ್ಮಿಸಲಾದ ಹೊಂಡಗಳಲ್ಲಿ ನೀರು ಇಂಗದಂತೆ ಪ್ಲಾಸ್ಟಿಕ್ ಕಪ್ಪು ಟಾರ್ಪಲ್‌ನ್ನು ಅಳವಡಿಸಲಾಗುತ್ತಿದೆ. ಆದರೆ ಆ ಕಪ್ಪು ಟಾರ್ಪಲ್ ಮೇಲೆ ಪಾಚಿ ಕಟ್ಟುತ್ತಿರುವುದರಿಂದ ಅವು ಅತ್ಯಂತ ಅಪಾಯಕಾರಿಯಾಗಿ ಮಾರ್ಪಟ್ಟಿವೆ. ಆಕಸ್ಮಿಕವಾಗಿ



ಬಂಗಾರಪೇಟೆ ತಾಲೂಕಿನಲ್ಲಿರುವ ಕೃಷಿ ಹೊಂಡ.

ಕಾಲುಜಾರಿ ಬಿದ್ದವರು ಮೇಲೆ ಹತ್ತಲು ಯಾವುದೇ ಆಧಾರ ಅಥವಾ ಹಿಡಿತ ಸಿಗದೆ ಹೊಂಡಗಳು ಶವಾಗಾರವಾಗುತ್ತಿವೆ.

ಕೇವಲ ಮನುಷ್ಯರಷ್ಟೇ ಅಲ್ಲದೆ ಜಾನುವಾರುಗಳು ಕೂಡಈಹೊಂಡಗಳಿಗೆಬಿದ್ದುಮೃತಪಡುತ್ತಿರುವುದು ರೈತರಿಗೆ ದೊಡ್ಡ ಆರ್ಥಿಕ ನಷ್ಟ ಉಂಟು ಮಾಡುತ್ತಿದೆ.

ಬಾಳಿ ಬದುಕಬೇಕಾದ ಮಕ್ಕಳು ಹೊಂಡ ಮಾಲೀಕರ ನಿರ್ಲಕ್ಷ್ಯದಿಂದ ಕೃಷಿ ಹೊಂಡಗಳಲ್ಲಿ ಆಟವಾಡಲು ಹೋಗಿ ತಮ್ಮ ಜೀವವನ್ನು ಕಳೆದುಕೊಳ್ಳುವಂತಾಗಿದೆ.

ತಾಲೂಕಿನಲ್ಲಿ ಎಲ್ಲಿಯೂ ಮಕ್ಕಳು ಬೇಸಿಗೆಯಲ್ಲಿ ಈಜಲು ನೀರಿಲ್ಲದ ಕಾರಣ ಮಕ್ಕಳು ನಿರ್ಜನ ಪ್ರದೇಶಗಳಲ್ಲಿರುವ ಈ ಹೊಂಡಗಳ ಆಳದ ಅರಿವಿಲ್ಲದೆ ಹಾಗೂ ಜಾರು ಬಂಡಿಯಂತಿರುವ ಪ್ಲಾಸ್ಟಿಕ್ ಕಪ್ಪು ಟಾರ್ಪಲ್ ಇರುವ ಹೊಂಡಗಳ ಒಳಗೆ ಬಿದ್ದವರು ಮೇಲೆ ಬರಲಾಗದೆ ಪ್ರಾಣ ಕಳೆದುಕೊಳ್ಳುತ್ತಿದ್ದಾರೆ. ಇದಕ್ಕೆ ಹೊಂಡಗಳ ಮಾಲೀಕರ ನಿರ್ಲಕ್ಷ್ಯ ಎಂದು ಪರಿಗಣಿಸಿ, ಆ ರೈತರ ಆಸ್ತಿಯನ್ನು ಹರಾಜು ಹಾಕಿ ಮೃತಪಟ್ಟ ಕುಟುಂಬಗಳಿಗೆ ಪರಿಹಾರ ನೀಡುವ ಕಾನೂನು ಜಾರಿಯಾಗಬೇಕೆಂದು ಸಾರ್ವಜನಿಕರ ಒತ್ತಾಯವಾಗಿದೆ.

ಶೇ.50 ಹೊಂಡಗಳಿಗೆ ಬೇಲಿಯೇ ಇಲ್ಲ!

ಸರ್ಕಾರದ ನಿಯಮದ ಪ್ರಕಾರ ಕೃಷಿ ಹೊಂಡ ನಿರ್ಮಿಸಿದ ನಂತರ ಅದರ ಸುತ್ತಲೂ ಕನಿಷ್ಠ 5 ಅಡಿ ಎತ್ತರದ ತಂತಿಬೇಲಿ ಅಳವಡಿಸುವುದು ಕಡ್ಡಾಯವಾಗಿದ್ದರೂ. ಈ ನಿಯಮವನ್ನು ಕಟ್ಟುನಿಟ್ಟಾಗಿ ಪಾಲಿಸಬೇಕಾದ ಮಾಲೀಕರು ನಿರ್ಲಕ್ಷ್ಯ ವಹಿಸುತ್ತಿದ್ದಾರೆ. ಕೃಷಿ ಇಲಾಖೆ ಮಾಹಿತಿ ಪ್ರಕಾರ ಜಿಲ್ಲಾದ್ಯಂತ ಸಾವಿರಾರು ಕೃಷಿ ಹೊಂಡಗಳಿದ್ದು, ಅದರಲ್ಲಿ ಶೇ. 50 ರಷ್ಟು ಕೃಷಿ ಹೊಂಡಗಳಿಗೆ ಬೇಲಿಯೇ ಇಲ್ಲ. ಅಪಾಯದ ಮುನ್ಸೂಚನೆ ನೀಡುವ ಫಲಕಗಳು ಇಲ್ಲದಿರುವುದು. ಅಧಿಕಾರಿಗಳ ಬೇಜವಾಬ್ದಾರಿತನಕ್ಕೆ ಸಾಕ್ಷಿಯಾಗಿದೆ.

> ಬಂಗಾರಪೇಟೆ ತಾಲೂಕು ಆಡಳಿತ ಹಾಗೂ ಕೃಷಿ ಇಲಾಖೆ ಎಚ್ಚೆತ್ತುಕೊಂಡು ತಾಲೂಕಿನಾದ್ಯಂತ ಇರುವ ಕೃಷಿ ಹೊಂಡಗಳನ್ನು ಸಮಗ್ರವಾಗಿ ಸರ್ವೆ ಮಾಡಿ ಸುರಕ್ಷತೆ ಇಲ್ಲದ ಹೊಂಡಗಳ ಮಾಲೀಕರಿಗೆ ತಕ್ಷಣವೇ ನೋಟಿಸ್ ನೀಡಿ ಬೇಲಿ ಅಳವಡಿಸಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಇಲ್ಲವಾದರೆ ಮಕ್ಕಳು, ಜಾನುವಾರು ಸಾವಿಗೆ ಕಾರಣವಾಗುವ ಇಂತಹ ಕೃಷಿ ಭಾಗ್ಯಗಳು ಜನ ಸಾಮಾನ್ಯರಿಗೆ ದುರಂತದ ಭಾಗ್ಯಗಳಾಗಿ ಪರಿಣಮಿಸುವುದರಲ್ಲಿ ಸಂಶಯವಿಲ್ಲ.
>
> • **ಸೂಲಿಕುಂಟೆ ಆನಂದ್**
> ದಲಿತ ಮುಖಂಡ.

ಸೌಲಭ್ಯ ಪಡೆಯಲು ಕಾರ್ಮಿಕರು ಸಂಘಟಿತರಾಗಿ

ಕಾರ್ಮಿಕರ ದಿನಾಚರಣೆ ಕಾರ್ಯಕ್ರಮದಲ್ಲಿ ಸಂಘದ ರಾಜ್ಯಾಧ್ಯಕ್ಷ ಮೇಸ್ತ್ರಿ ನಾರಾಯಣಸ್ವಾಮಿ ಸಲಹೆ

ಚಿಂತಾಮಣಿ: ಕಾರ್ಮಿಕ ಇಲಾಖೆಯ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳು ಪಡೆದುಕೊಳ್ಳಲು ಸಂಘಟಿತರಾಗುವುದು ಅತ್ಯಗತ್ಯ ಎಂದು ರಾಜ್ಯ ಟೈಲ್ಸ್ ಮತ್ತು ಗ್ರಾನೈಟ್ ಹಾಗೂ ಕಟ್ಟಡ ನಿರ್ಮಾಣ ಕಾರ್ಮಿಕರ ಸಂಘದ ರಾಜ್ಯಾಧ್ಯಕ್ಷ ಮೇಸ್ತ್ರಿ ನಾರಾಯಣಸ್ವಾಮಿ ತಿಳಿಸಿದರು.

ನಗರದ ಎನ್.ಎನ್.ಟಿ ರಸ್ತೆಯ ಊರುಮುಂದೆ ಆಯೋಜಿಸಿದ್ದ ಕಾರ್ಮಿಕರ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿ ಕಾರ್ಮಿಕರ ಹಿತದೃಷ್ಟಿಯಿಂದ ಕಾನೂನು ಬದಲಾವಣೆಯಾಗಿದ್ದು, ಪ್ರತಿ ವರ್ಷ ಗುರುತಿನ ಚೀಟಿಯನ್ನು ಕಡ್ಡಾಯವಾಗಿ ನವೀಕರಿಸಿಕೊಳ್ಳಬೇಕು. ಆದರೆ ಇಂದು ನೈಜ ಕಾರ್ಮಿಕರ ಬದಲಿಗೆ ಬೇರೆಯವರೂ ಕಾರ್ಡ್ ಪಡೆಯುತ್ತಿರುವುದು ದುರದೃಷ್ಟಕರ. ಸಂಘಟನೆಯ ಮೂಲಕ ಅಧಿಕಾರಿಗಳ ಭ್ರಷ್ಟಾಚಾರವನ್ನು ಪ್ರಶ್ನಿಸಬೇಕು ಮತ್ತು ಅರ್ಹರಿಗೆ ಮಾತ್ರ ಸೌಲಭ್ಯ ಸಿಗುವಂತೆ ನೋಡಿಕೊಳ್ಳಬೇಕೆಂದರು.

ಜಿಲ್ಲಾ ಕ್ಷೇತ್ರಾಧಿಕಾರಿ ಎಂ.ಡಿ. ಬೇಗ್ ಮಾತನಾಡಿ ಇಲಾಖೆಯಿಂದ ವೈದ್ಯಕೀಯ, ವಿವಾಹ ಹಾಗೂ ಶೈಕ್ಷಣಿಕ ಸೌಲಭ್ಯ ನೀಡಲಾಗುತ್ತಿದೆ. ಆದರೆ ಬೋಗಸ್ ಕಾರ್ಡ್‌ಗಳ ಹಾವಳಿಯಿಂದಾಗಿ ನೈಜ ಕಾರ್ಮಿಕರು ವಂಚಿತರಾಗುತ್ತಿದ್ದಾರೆ. ಕಾರ್ಮಿಕರು ಅರ್ಜಿ ಸಲ್ಲಿಸುವಾಗ ಜಾಗರೂಕತೆಯಿಂದ ಇರಬೇಕು ಎಂದು ಎಚ್ಚರಿಸಿದರು.

ನಗರಸಭೆ ಮಾಜಿ ಉಪಾಧ್ಯಕ್ಷ ಶಿವಣ್ಣ, ಮಾಜಿ ಸದಸ್ಯ ದೇವಳಂ ಶಂಕರ್, ಸಂಘದ ಕಾನೂನು ಸಲಹೆಗಾರ ಮಂಜುನಾಥರೆಡ್ಡಿ, ಕೆಇಬಿ ಎಸ್‌ಸಿ/ಎಸ್‌ಟಿ ವಿಭಾಗದ ಪ್ರಧಾನ ಕಾರ್ಯದರ್ಶಿ ರವಿಕುಮಾರ್, ಅಗ್ರಹಾರ ಮೋಹನ್ ಮತ್ತಿತರರು ಮಾತನಾಡಿದರು. ಇದೇ ವೇಳೆ ಹಿರಿಯ ಕಾರ್ಮಿಕರನ್ನು ಸನ್ಮಾನಿಸಲಾಯಿತು ಹಾಗೂ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಕಿಟ್ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಸಂಘದ ಪ್ರಮುಖರು ಹಾಗೂ ನೂರಾರು ಕಾರ್ಮಿಕರು ಭಾಗವಹಿಸಿದ್ದರು.



ಚಿಂತಾಮಣಿ ನಗರದ ಎನ್.ಎನ್.ಟಿ ರಸ್ತೆಯ ಊರುಮುಂದೆ ಆಯೋಜಿಸಿದ್ದ ಕಾರ್ಮಿಕರ ದಿನಾಚರಣೆಯಲ್ಲಿ ಹಿರಿಯ ಕಾರ್ಮಿಕರನ್ನು ಸನ್ಮಾನಿಸಲಾಯಿತು ಹಾಗೂ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಕಿಟ್ ವಿತರಿಸಲಾಯಿತು.

- ಕಾರ್ಮಿಕರ ಹಿತದೃಷ್ಟಿಯಿಂದ ಕಾನೂನು ಬದಲಾಗಿದ್ದು, ಪ್ರತಿ ವರ್ಷ ಗುರುತಿನ ಚೀಟಿ ಕಡ್ಡಾಯವಾಗಿ ನವೀಕರಿಸಬೇಕು
- ಆದರೆ ಇಂದು ನಿಜವಾದ ಕಾರ್ಮಿಕರ ಬದಲಿಗೆ ನಕಲಿ ಕಾರ್ಮಿಕರೇ ಹೆಚ್ಚಾಗಿ ಕಾರ್ಡ್ ಪಡೆಯುತ್ತಿದ್ದಾರೆ

ಕೆಜಿಎಫ್‌ನಲ್ಲಿ ಕಾರ್ಯಾಚರಣೆ: 130ಕೆಜಿ ಏಕಬಳಕೆ ಪ್ಲಾಸ್ಟಿಕ್ ವಶ



ಹಿರಿಯ ಆರೋಗ್ಯಾಧಿಕಾರಿ ಮಂಗಳಗೌರಿ ಏಕ ಬಳಕೆ ಪ್ಲಾಸ್ಟಿಕ್ ವಶಪಡಿಸಿಕೊಂಡಿರುವುದು.

- **ಕನ್ನಡಪ್ರಭ ವಾರ್ತೆ,** ಕೆಜಿಎಫ್

ಕೆಜಿಎಫ್ ನಗರದಲ್ಲಿ ಏಕ ಬಳಕೆ ಪ್ಲಾಸ್ಟಿಕ್ ನಿಯಂತ್ರಿಸಲು ನಗರಸಭೆ ಪರಿಸರ ಇಲಾಖೆ ಟಾಸ್ಕ್ ಫೋರ್ಸ್ ರಚಿಸಿದ್ದು, ಈ ವಿಶೇಷ ಕಾರ್ಯಪಡೆ ತಂಡ ಅಕ್ರಮವಾಗಿ ದಾಸ್ತಾನು ಮಾಡಿರುವ ಪ್ಲಾಸ್ಟಿಕ್ ಬಳಕೆ ವಿರುದ್ಧ ಕಾರ್ಯಾಚರಣೆ ಆರಂಭಿಸಿದ್ದು, ಮೊದಲನೇ ದಿನವೇ 130 ಕೆಜಿ ಏಕ ಬಳಕೆ ಪ್ಲಾಸ್ಟಿಕ್‌ನ್ನು ನಗರಸಭೆ ಹಿರಿಯ ಆರೋಗ್ಯಾಧಿಕಾರಿಗಳ ತಂಡ ವಶಪಡಿಸಿಕೊಂಡಿದೆ.

ಕಳೆದ ಸಾಲಿನಲ್ಲಿ ಒಂದು ಸಾವಿರ ಅಂಗಡಿ ಗಳ ಮೇಲೆ ದಾಳಿ ಮಾಡಿ ಅಪಾರ ಪ್ರಮಾಣದ ಪ್ಲಾಸ್ಟಿಕ್ ವಶಪಡಿಸಿಕೊಳ್ಳಲಾಗಿದೆ ಎಂದು ಪೌರಾಯುಕ್ತ ಶ್ರೀಧರ್ ತಿಳಿಸಿದರು.

ತಂಡದಲ್ಲಿ ಕೆಲಸ ಮಾಡಲು ಒಬ್ಬರು ಹಿರಿಯ ಆರೋಗ್ಯಾಧಿಕಾರಿಗಳು ಹಾಗೂ ನಗರಸಭೆ ಸಿಬ್ಬಂದಿ ಜೊತೆಗೆ ಪೌರಕಾರ್ಮಿರನ್ನು ನೇಮಿಸಿಕೊಳ್ಳಲಾಗಿದೆ. ಪ್ಲಾಸ್ಟಿಕ್ ಮಾತ್ರ ಬಳಸಿ ಬಿಸಾಡುವ ಏಕ ಬಳಕೆ ಪ್ಲಾಸ್ಟಿಕ್ ಭೂಮಿಯಲ್ಲಿ ಕೊಳೆಯದೆ ಉಳಿಯುವುದರಿಂದ ಪರಿಸರಕ್ಕೆ ಹೆಚ್ಚು ಹಾನಿ ಮಾಡುವುದರ ಜೊತೆಗೆ ಕುಡಿಯುವ ನೀರನ್ನು ಕಲಷಿತಗೊಳಸಲಿದೆ ಎಂದು ಅವರು ಹೇಳಿದರು.

ಕೆಜಿಎಫ್ ಎಂ.ಜಿ ಮಾರುಕಟ್ಟೆಯಲ್ಲಿ ಏಕ ಬಳಕೆ ಪ್ಲಾಸ್ಟಿಕ್ ತಗ್ಗಿಸಲು ಸ್ವತಃ ಜಿಲ್ಲಾಧಿಕಾರಿ ಡಾ.ಎಂ.ಆರ್. ರವಿ ಅವರು ನಗರಸಭೆ ಅಧಿಕಾರಿಗಳ ಸಭೆಯಲ್ಲಿ ಸೂಚಿಸಿದ್ದಾರೆ. ಅಕ್ರಮ ದಾಸ್ತನು ಮಾಡಿ ರುವ ಅಂಗಡಿಗಳ ಮೇಲೆ ದಾಳಿ ನಡೆಸಿ ದಂಡ ವಿಧಿಸಿ, ಮುಂದಿನ ದಿನಗಳಲ್ಲಿ ಪ್ಲಾಸ್ಟಿಕ್ ಮಾರಾಟ ಕಂಡು ಬಂದಲ್ಲಿ ಅಂಗಡಿ ಪರವಾನಿಗೆ ರದ್ದುಗೊಳಿಸಲಾಗುವುದೆಂದು ತಿಳಿಸಿದರು.

ತ್ಯಾರನಹಳ್ಳಿ ಬಿರೇಶ್ವರ ಸ್ವಾಮಿ ಪುನರ್‌ಪ್ರಾಣ ಪ್ರತಿಷ್ಠಾಪನೆ

ಕೋಲಾರ: ಬಂಗಾರಪೇಟೆ ತಾಲೂಕಿನ ತ್ಯಾರನಹಳ್ಳಿಯಲ್ಲಿ ನೂತನ ಶ್ರೀ ಬಿರೇಶ್ವರ ಸ್ವಾಮಿಯ ವಿಗ್ರಹದ ಪುನರ್‌ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ರಮ ನಡೆಯಿತು.

ನೂತನ ಬಿರೇಶ್ವರ ಸ್ವಾಮಿ ವಿಗ್ರಹದ ಪುನರ್‌ಪ್ರತಿಷ್ಠಾಪನೆ ಊಸರಳ್ಳಿ ಮಠದ ರೇವಣಾರಾಧ್ಯ ಸ್ವಾಮೀಜಿ ಸಮ್ಮುಖದಲ್ಲಿ ನೆರವೇರಿತು. ಶ್ರೀ ಸಿದ್ದೇಶ್ವರ, ಶ್ರೀ ಬೀರೇಶ್ವರ, ವೀರ ಮುದ್ದಮ್ಮ ಟ್ರಸ್ಟ್‌ನಿಂದ ಹಮ್ಮಿಕೊಳ್ಳಲಾಗಿದ್ದ ಎರಡು ದಿನಗಳ ಕಾಲ ನಡೆದ ಹೋಮ ಹವನ ಪೂಜಾ ಕಾರ್ಯಕ್ರಮದಲ್ಲಿ ನೂರಾರು ಸಂಖ್ಯೆ ಯ ಹಾಲು ಮತಸ್ಥರು, ಕುರುಬ ಸಮು ದಾಯದವರು ಭಾಗವಹಿಸಿದ್ದರು.ಇದೇ ಸಂದರ್ಭದಲ್ಲಿ ಶ್ರೀ ಪಾರ್ವ ತಾಂಭ, ಮಹಾ ಗಣಪತಿ, ಬಸವೇಶ್ವರ ಸ್ವಾಮಿಗಳ ನೂತನ ವಿಗ್ರಹ ಪ್ರತಿಷ್ಠಾಪನೆ ನೆರವೇರಿಸಲಾಯಿತು.

ವೇದ, ಘೋಷ ಮಂತ್ರಗಳೊಂದಿಗೆ ಭಕ್ತಿ ಪೂರಕವಾಗಿ ಹಾಗೂ ಅದ್ದೂರಿಯಾಗಿ 3 ದಿನಗಳ ಕಾಲ ನಡೆದ ನೂತನ ವಿಗ್ರಹಗಳ ಪುನರ್‌ಪ್ರತಿಷ್ಠಾಪನೆ ಕಾರ್ಯಕ್ರಮ ಊಸರಳ್ಳಿ ಮಠದ ರೇವಣಾರಾಧ್ಯ ಸ್ವಾಮೀಜಿ ನೇತೃತ್ವದಲ್ಲಿ ವೇದ, ಘೋಷ, ಮಂತ್ರಗಳ ಮೂಲಕ ಆಗಮಿಕರು ಹೋಮ ಹವನ ಮಾಡಿಸಿದರು. ಮುಜರಾಯಿ ಇಲಾಖೆ ವ್ಯಾಪ್ತಿಗೆ ಬರುವ ಬಿರೇಶ್ವರ ಸ್ವಾಮಿ ದೇವಾಲಯಕ್ಕೆ ಹತ್ತಾರು ದಾನಿಗಳು ಆರ್ಥಿಕ ನೆರವು ನೀಡಿದ್ದು, ಅದರಂತೆ ನೂರಾರು ಭಕ್ತರ ಸಮ್ಮುಖದಲ್ಲಿ ಹತ್ತಾರು ದಂಪತಿಗಳು ಹೋಮ ನಡೆಸುವ ಮೂಲಕ ಬಿರೇಶ್ವರ ಸ್ವಾಮಿಯ ವಿಗ್ರಹದ ಪುನರ್‌ಪ್ರಾಣ ಪ್ರತಿಷ್ಠಾನೆ ನಡೆಯಿತು.

ಕ್ರೀಡೆಗಳಿಂದ ವ್ಯಕ್ತಿಯ ಸಮಗ್ರ ಅಭಿವೃದ್ಧಿ: ವಿಜಯಕುಮಾರ್

ಲಕ್ಕೂರು ಪ್ರಿಮಿಯರ್ ಲೀಗ್–2026 ಐಪಿಎಲ್ ಸೀಸನ್ ಟೂರ್ನಿ



ಮಾಲೂರು ತಾಲೂಕಿನ ಲಕ್ಕೂರು ಗ್ರಾಮದಲ್ಲಿ ಜೆಡಿಎಸ್ ಮುಖಂಡರು ಆಯೋಜಿಸಿದ್ದ ಲಕ್ಕೂರು ಪ್ರಿಮಿಯರ್ ಲೀಗ್ ಕ್ರಿಕೆಟ್ ಪಂದ್ಯಾವಳಿಯ ಸಮಾರೋಪ ಸಮಾರಂಭದಲ್ಲಿ ಜೆಡಿಎಸ್ ಮುಖಂಡ ಹೂಡಿ ವಿಜಯಕುಮಾರ್ ಮಾತನಾಡಿದರು.

- **ಕನ್ನಡಪ್ರಭ ವಾರ್ತೆ,** ಮಾಲೂರು

ವ್ಯಕ್ತಿಯ ಸರ್ವತೋಮುಖ ಅಭಿವೃದ್ಧಿಗೆ ಕ್ರೀಡೆ ಪ್ರಮುಖ ಪಾತ್ರ ವಹಿಸಲಿದ್ದು, ದೈಹಿಕ ಹಾಗೂ ಮಾನಸಿಕ ಆರೋಗ್ಯವನ್ನು ಸಮತೋಲನದಿಂದ ಕಾಪಾಡಲಿದೆ ಎಂದು ಜೆಡಿಎಸ್ ಮುಖಂಡ ಹೂಡಿ ವಿಜಯಕುಮಾರ್ ಹೇಳಿದರು. ಅವರು ಲಕ್ಕೂರು ಗ್ರಾಮದ ಸರ್ಕಾರಿ ಪಿಯು ಕಾಲೇಜು ಮೈದಾನದಲ್ಲಿ ಲಕ್ಕೂರು ಗ್ರಾಮದ ಜೆಡಿಎಸ್ ಮುಖಂಡರ ನೇತೃತ್ವದಲ್ಲಿ ಹಮ್ಮಿಕೊಂಡಿದ್ದ ಲಕ್ಕೂರು ಪ್ರಿಮಿಯರ್ ಲೀಗ್-2026 ಐಪಿಎಲ್ ಸೀಸನ್-5 ಕ್ರಿಕೆಟ್ ಪಂದ್ಯಾವಳಿಗಳಲ್ಲಿ ವಿಜೇತರಿಗೆ ಬಹುಮಾನ ವಿತರಿಸಿ ಅವರು ಮಾತನಾಡಿದರು.ಕೊಡೂರು ತಂಡವು ಪ್ರಥಮ ಸ್ಥಾನ ಗಳಿಸಿ ಹತ್ತು ಸಾವಿರ ನಗದು ಬಹುಮಾನ, ಚೊಡಗೊಂಡನಹಳ್ಳಿ ದ್ವಿತೀಯ ಸ್ಥಾನಗಳಿಸಿ 5 ಸಾವಿರ ನಗದು, ಲಕ್ಕೂರು ತಂಡವು ಎರಡೂವರೆ ಸಾವಿರ ನಗದು ಬಹುಮಾನ ವಿತರಿಸಲಾಗಿತಲ್ಲದೇ, ವೈಯಕ್ತಿಕ ಪ್ರದರ್ಶನಗಳ ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಜೆಡಿಎಸ್ ಮುಖಂಡ ಆರ್. ಪ್ರಭಾಕರ್, ಹರೀಶ್ ಗೌಡ, ಎಲ್.ಎಸ್. ಚೇತನ್ ಗೌಡ, ಸುರೇಶ್, ರಾಮಚಂದ್ರ, ಹೇಮಂತ್ ಗೌಡ, ಶಿವಾನಂದ, ಕಲ್ಯಾಣ್,ಮಹೇಶ್, ಎ.ಎಲ್.ಕೆ. ಕುಟ್ಟಿ, ವೆಂಕಟೇಶ್, ಶಿವಕುಮಾರ್ ಗೌಡ ಇನ್ನಿತರರು ಇದ್ದರು.

ನಾ.ಸು. ಹರ್ಡೀಕರ್ ಸ್ಮರಣೆ | ಭಾರತ ಸೇವಾದಳ ಗೌರವಾಧ್ಯಕ್ಷ ಸಿ.ಎಂ.ಆರ್. ಶ್ರೀನಾಥ್ ಸಲಹೆ | ನಾ.ಸು. ಹರ್ಡೀಕರ್ ಜನ್ಮ ಜಯಂತಿ ಕಾರ್ಯಕ್ರಮ

ಶಾಲಾ ವಿದ್ಯಾರ್ಥಿಗಳಿಗೆ ಸೇವಾದಳ ಶಿಕ್ಷಣ ಕಡ್ಡಾಯವಾಗಲಿ

- **ಕನ್ನಡಪ್ರಭ ವಾರ್ತೆ** ಕೋಲಾರ

ಸ್ವಾತಂತ್ರ್ಯ ಚಳವಳಿಗೆ ಯುವ ಸಮೂಹವನ್ನು ಸಂಘಟಿಸಲು ಕರ್ನಾಟಕ ನಾ.ಸು. ಹರ್ಡೀಕರ್‌ಆರಂಭಿಸಿದ ಭಾರತ ಸೇವಾದಳ ತರಬೇತಿ ಶಿಕ್ಷಣವು ಪ್ರಸ್ತುತ ಪರಿಸ್ಥಿತಿಯಲ್ಲಿಯೂ ಪ್ರತಿ ವಿದ್ಯಾರ್ಥಿಗೂ ಅಗತ್ಯವಾಗಿದ್ದು, ಸೇವಾದಳಶಿಕ್ಷಣವನ್ನುಪ್ರತಿಶಾಲೆಯಲ್ಲಿಯೂ ಕಡ್ಡಾಯಗೊಳಿಸಬೇಕೆಂದು ಭಾರತ ಸೇವಾದಳ ಗೌರವಾಧ್ಯಕ್ಷ ಸಿ.ಎಂ.ಆರ್. ಶ್ರೀನಾಥ್ ಹೇಳಿದರು.

ನಗರದ ಖಾದ್ರಿಪುರದಲ್ಲಿರುವ ಶ್ರೀನಲ್ಲೂರಮ್ಮ ದೇವಿ ಮಕ್ಕಳ ಆಶ್ರಮ ಕ್ಷೇಮಾಭಿವೃದ್ಧಿ ಟ್ರಸ್ಟ್‌ನಲ್ಲಿ ಗುರುವಾರ ಆಯೋಜಿಸಿದ್ದ ನಾ.ಸು. ಹರ್ಡೀಕರ್‌ಜನ್ಮ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಕ್ಕಳನ್ನುದ್ದೇಶಿಸಿ ಮಾತನಾಡಿದರು.



ಕೋಲಾರದ ಖಾದ್ರಿಪುರ ಶ್ರೀ ನಲ್ಲೂರಮ್ಮ ದೇವಿ ಮಕ್ಕಳ ಆಶ್ರಮದಲ್ಲಿ ಗುರುವಾರ ಭಾರತ ಸೇವಾದಳ ಸಂಸ್ಥಾಪಕ ನಾ.ಸು.ಹರ್ಡೀಕರ್‌ಜಯಂತಿ ಆಚರಿಸಲಾಯಿತು.

ಆರಂಭದಲ್ಲಿ ಹಿಂದೂಸ್ತಾನಿ ಸೇವಾದಳವಾಗಿದ್ದ ಭಾರತ ಸೇವಾದಳದ ಮೂಲಕ ಯುವ ಸಮೂಹವು ದೇಶ ಪ್ರೇಮ, ದೇಶ ಭಕ್ತಿ, ರಾಷ್ಟ್ರಧ್ವಜಕ್ಕೆ ಗೌರವ ಸಲ್ಲಿಕೆ. ಶಿಸ್ತು ದೈಹಿಕ ಸದೃಢತೆಯನ್ನು ಪಡೆದು ಸ್ವಾತಂತ್ರ್ಯ ಸಂಗ್ರಾಮದಲ್ಲಿ ಧೈರ್ಯದಿಂದ ಪಾಲ್ಗೊಂಡು ದೇಶಕ್ಕೆ ಸ್ವಾತಂತ್ರ್ಯವನ್ನು ತಂದುಕೊಟ್ಟಿದ್ದರು. ಈಗಲೂ ಮಕ್ಕಳಲ್ಲಿ ದೇಶ ಪ್ರೇಮ, ಸೌಹಾರ್ದತೆ ಮತ್ತು ಸೇವಾ ಮನೋಭಾವನೆಯನ್ನು ಮೂಡಿಸಲು ಸೇವಾದಳ ಶಿಕ್ಷಣ ಅಗತ್ಯವಾಗಿದೆ ಎಂದರು.

ಭಾರತ ಸೇವಾದಳದ ಜಿಲ್ಲಾಧ್ಯಕ್ಷ ಕೆ.ಎಸ್. ಗಣೇಶ್ ಮಾತನಾಡಿ, ಬಾಲ್ಯದಲ್ಲಿಯೇ ತಂದೆ ತಾಯಿ ಕಳೆದುಕೊಂಡರೂ ಎದೆಗುಂದದೆ ಅಪ್ರತಿಮ ರಾಷ್ಟ್ರಪ್ರೇಮಿಯಾಗಿ, ವೈದ್ಯರಾಗಿ, ಸೇವಾ ಮನೋಭಾವನೆಯನ್ನು ಮೈಗೂಡಿಸಿಕೊಂಡು, ಗಾಂಧಿ ತತ್ವಗಳಡಿ ಭಾರತ ಸೇವಾದಳವನ್ನು ಸ್ಥಾಪಿಸಿ ಸ್ವಾತಂತ್ರ್ಯ ಹೋರಾಟಗಾರರಾಗಿ ಜನಿಸಿದ 137 ವರ್ಷಗಳ ನಂತರವೂ ಸ್ಮರಣೀಯರಾಗಿರುವ ನಾ.ಸು.ಹರ್ಡೀಕರ್‌ಅವರ ಪ್ರೇರಣೆಯಲ್ಲಿ ಆಶ್ರಮದ ಮಕ್ಕಳು ಉತ್ತಮ ವಿದ್ಯಾಭ್ಯಾಸ ಪಡೆದು ಸಮಾಜದಲ್ಲಿ ಉನ್ನತ ಸ್ಥಾನಕ್ಕೇರಬೇಕೆಂದು ಆಶಿಸಿದರು.

ಕಾರ್ಯಕ್ರಮದಲ್ಲಿ ಮಾಲೂರು ತಾಲೂಕು ಭಾರತ ಸೇವಾದಳ ಅಧ್ಯಕ್ಷ ಬಹದೂರ್‌ಸಾಬ್, ಹಿರಿಯ ಸೇವಾದಳ ಮುಖಂಡ ವಿ.ಪಿ. ಸೋಮಶೇಖರ್, ಸೇವಾದಳ ಪದಾಧಿಕಾರಿಗಳಾದ ಕೆ.ಜಯದೇವ್, ಮುನಿವೆಂಕಟಯಾದವ್, ರೆಡ್ಡಿ, ಜಗದೀಶ್, ಡೊಮಿನಿಕ್, ರಾಮು, ನ್ಯೂಸ್ ಚಂದ್ರು, ರಮ್ಯ ಇದ್ದರು.

ಶ್ರೀ ನಲ್ಲೂರಮ್ಮ ಮಕ್ಕಳ ಆಶ್ರಮದ ಮುಖ್ಯಸ್ಥ ಭುವನೇಶ್ವರ್‌ಕಾರ್ಯಕ್ರಮಕ್ಕೆ ಸಹಕಾರ ನೀಡಿದರು. ಭಾರತ ಸೇವಾದಳ ಸಂಘಟಕ ಎಂ.ಬಿ. ದಾನೇಶ್ ಕಾರ್ಯಕ್ರಮ ನಿರೂಪಿಸಿದರು.

ಜನತಾದರ್ಶನ ಮುಂದುವರಿಸಲು ಸಂಸದರಿಗೆ ಮನವಿ

ಚಿಕ್ಕಬಳ್ಳಾಪುರ: ಸಂಸದ ಡಾ.ಕೆ. ಸುಧಾಕರ್ ಅವರು ಪ್ರತಿ ಸೋಮವಾರ ಜಿಲ್ಲಾಡಳಿತ ಭವನದ ಸಂಸದರ ಕಚೇರಿಯಲ್ಲಿ ನಡೆಸುತ್ತಿದ್ದ ಜನತಾದರ್ಶನ ಕಾರ್ಯಕ್ರಮವು ಬಡವರು ತಮ್ಮ ಕಷ್ಟಕಾರ್ಪಣ್ಯಗಳನ್ನು ಹೇಳಿಕೊಳ್ಳಲು ಇರುವ ಉತ್ತಮ ವೇದಿಕೆಯಾಗಿತ್ತು. ಸಂಸದರು ಜನತಾ ದರ್ಶನವನ್ನು ಮತ್ತೆ ಮುಂದುವರಿಸಬೇಕು ಎಂದು ಸಮಾಜ ಸೇವಕ ಅಣಕನೂರು ಅನಂತಕುಮಾರ್‌ಮನವಿ ಮಾಡಿದ್ದಾರೆ. ನಗರದಲ್ಲಿಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಸಂಸದ ಡಾ. ಸುಧಾಕರ್‌ಅವರು ಸಂಸದರಾದ ನಂತರ ಅವರ ಅಧ್ಯಕ್ಷತೆಯಲ್ಲಿ ನಡೆಸುತ್ತಿದ್ದ ಜನತಾದರ್ಶನವು ಅತ್ಯಂತ ಯಶಸ್ವೀ ಕಾರ್ಯಕ್ರಮವಾಗಿತ್ತು. ಈ ಕಾರ್ಯಕ್ರಮಕ್ಕೆ ಸುಮಾರು 8 ರಿಂದ 10 ತಾಲೂಕುಗಳಿಂದ ಸಾರ್ವಜನಿಕರು, ಹಿರಿಯ ನಾಗರೀಕರು, ವಿದ್ಯಾರ್ಥಿಗಳು, ಹೆಣ್ಣುಮಕ್ಕಳು, ವಯಸ್ಸಾದವರು ತಮ್ಮ ಕಷ್ಟ ಸುಖಗಳನ್ನು ಹೊತ್ತು ಬರುತ್ತಿದ್ದರು. ಕೆಲವೊಂದು ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಪರಿಹಾರ ಕಾಣಿಸುತ್ತಿದ್ದರು. ಮತ್ತೊಂದಷ್ಟು ಕಾಲಮಿತಿಯಲ್ಲಿ ಪರಿಹಾರ ಆಗುತ್ತಿದ್ದವು. ಹೀಗಾಗಿ ಇಂತಹ ಕಾರ್ಯಕ್ರಮ ನಿಲ್ಲಬಾರದು ಎಂದರು.



ಗುರಿ ಸಾಧನೆಗೆ ಶ್ರಮ, ಸಮಯ ಅಗತ್ಯ: ನಟ ಡಾಲಿ ಧನಂಜಯ್

ನಾಗಾರ್ಜುನ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಐಕ್ಯ – 2026 ಉದ್ಘಾಟನಾ ಸಮಾರಂಭ

• **ಕನ್ನಡಪ್ರಭ ವಾರ್ತೆ** ಚಿಕ್ಕಬಳ್ಳಾಪುರ

ಜೀವನದಲ್ಲಿ ಪ್ರತಿಯೊಬ್ಬ ವ್ಯಕ್ತಿಯು ಗುರಿ ಸಾಧಿಸಲು ಶ್ರಮಿಸಬೇಕು. ರಾತ್ರೋರಾತ್ರಿ ಶ್ರೀಮಂತರಾಗಲು ಸಾಧ್ಯವಿಲ್ಲ. ಎಲ್ಲದಕ್ಕೂ ಸಮಯ ಅಗತ್ಯ ಎಂದು ಚಿತ್ರನಟ, ನಿರ್ದೇಶಕ ಡಾಲಿ ಧನಂಜಯ್ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ನಗರ ಹೊರವಲಯದ ನಾಗಾರ್ಜುನ ಎಂಜಿನಿಯರಿಂಗ್ ಮತ್ತು ತಾಂತ್ರಿಕ ಮಹಾ ವಿದ್ಯಾಲಯದಲ್ಲಿ ಆಯೋಜಿಸಿದ್ದ ಐಕ್ಯ - 2026 ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿ, ಮಾನವ ಜೀವನದ ಪ್ರತಿಯೊಂದು ಹಂತವೂ ಬಹು ಮುಖ್ಯ. ಅದರಲ್ಲೂ ವಿದ್ಯಾರ್ಥಿ ಜೀವನ ಜೀವನದ ಅತೀ ಮುಖ್ಯ ಘಟ್ಟ. ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಮೂಲಕ ವಿದ್ಯಾರ್ಥಿ ಜೀವನವನ್ನು ಹೆಚ್ಚು ಅನುಭವಿ ಸಬೇಕು ಎಂದು ಸಲಹೆ ನೀಡಿದರು.

ನಾವು ಅಂದುಕೊಂಡಂತೆ ಎಲ್ಲವನ್ನೂ ಸಾಧಿಸಲು ಸಾಧ್ಯವಿಲ್ಲ. ಆದ್ದರಿಂದ, ಎಂದಿಗೂ ಧೃತಿಗೆಡಬೇಡಿ. ಸೋಲನ್ನು ಒಪ್ಪಿಕೊಳ್ಳುವ ಮನಸ್ಥಿತಿ ಬೆಳೆಸಿಕೊಳ್ಳಬೇಕು. ಸೋಲನ್ನು ಅನುಭವಿಸಬೇಕು. ಸೋಲಿನ ಅನುಭವವಾದಾಗಲೇ ಗೆಲುವಿನ ದಾರಿ ತಿಳಿಯುತ್ತದೆ. ಆದ್ದರಿಂದ, ಸೋತು ಗೆಲ್ಲೋಣ ಎಂದು ತಮ್ಮ ಜೀವನದ ಅನುಭವವನ್ನು ಹಂಚಿಕೊಂಡರು. ಇದೇ ವೇಳೆ ಎನ್.ಜಿ. ಐ ನಿರ್ದೇಶಕ ಡಾ.ಎಸ್.ಜಿ. ಗೋಪಾಲಕೃಷ್ಣ, ಕಾಲೇಜು ಪ್ರಾಂಶುಪಾಲ ಡಾ.ಜಿ.ತಿಪ್ಪೇಸ್ವಾಮಿ ಮಾತನಾಡಿದರು. ಮ್ಯಾನೇಜ್‌ಮೆಂಟ್ ವಿಭಾಗ ಆಯೋಜಿಸಿದ್ದ ಐಪಿಎಲ್ ಆಕ್ಷನ್ ವಾರ್‌ಹೆಚ್ಚು ಯುವಜನರ ಗಮನ ಸೆಳೆಯಿತು. ರಾಜ್ಯದ ವಿವಿಧ ಕಾಲೇಜುಗಳ 60 ತಂಡಗಳು ಭಾಗವಹಿಸಿದ್ದವು. ಈ ಪೈಕಿ ಮುಂಬೈ ಇಂಡಿಯನ್ಸ್ ಮೊದಲ ಸ್ಥಾನ, ಚೆನ್ನೈ ಸೂಪರ್‌ಕಿಂಗ್ಸ್ ದ್ವಿತೀಯ ಸ್ಥಾನ ಪಡೆದವು. ವಿಜೇತತಂಡಗಳಿಗೆ ಬಹುಮಾನ, ಪ್ರಶಸ್ತಿ ಪತ್ರ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಸಿಇಒ ಭಾನು ಚೈತನ್ಯ ವರ್ಮಾ, ಎನ್.ಸಿ.ಎಂ.ಎಸ್ ಪ್ರಾಂಶುಪಾಲೆ ಆನಂದಮ್ಮ, ಮಾನವ ಸಂಪನ್ಮೂಲ ವಿಭಾಗ ಮುಖ್ಯಸ್ಥೆ ಲತಾ, ಕಿಶನ್, ಶಿಬು, ಮಂಜುನಾಥ್ ಬಚ್ಚೇಗೌಡ ಇದ್ದರು.



ನಗರ ಹೊರವಲಯದ ನಾಗಾರ್ಜುನ ಇಂಜಿನಿಯರಿಂಗ್ಕಾಲೇಜಿನಲ್ಲಿ ನಡೆದ ಐಕ್ಯ – 2026 ಸಮಾರಂಭದಲ್ಲಿ ನಟ ಡಾಲಿ ಧನಂಜಯ್ ಅವರನ್ನು ಸನ್ಮಾನಿಸಲಾಯಿತು

2028ಕ್ಕೆ ಶಿಡ್ಲಘಟ್ಟದಲ್ಲಿ ಬಿಜೆಪಿಗೆ ಜಯ

ಸೀಕಲ್ ಆನಂದಗೌಡ ಹೇಳಿಕೆ | ಅಭಿಮಾನೋತ್ಸವಕ್ಕೆ ಕಾರ್ಯಕರ್ತರಿಗೆ ಬೀಳ್ಕೊಡುಗೆ

• **ಕನ್ನಡಪ್ರಭ ವಾರ್ತೆ** ಶಿಡ್ಲಘಟ್ಟ

ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಕ್ಷೇತ್ರವನ್ನು ಸಂಪೂರ್ಣ ಕೇಸರಿಮಯ ಮಾಡುವ ಗುರಿಯನ್ನು ಹೊಂದಲಾಗಿದೆ ಎಂದು ಬಿಜೆಪಿ ಗ್ರಾಮಾಂತರ ಮಂಡಲ ಅಧ್ಯಕ್ಷ ಸೀಕಲ್ ಆನಂದ ಗೌಡ ಹೇಳಿದರು.

ಚಿತ್ರದುರ್ಗದಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿ ಯೂರಪ್ಪ ಅವರಿಗೆ ಹಮ್ಮಿಕೊಂಡಿ ರುವ ಅಭಿಮಾನೋ ತ್ಸವದಲ್ಲಿ ಪಾಲ್ಗೊಳ್ಳಲು ತೆರಳುತ್ತಿರುವ ಕಾರ್ಯಕರ್ತರನ್ನು ಬೀಳ್ಕೊಟ್ಟು ಅವರು ಮಾತನಾಡಿದರು. ಸುದೀರ್ಘ 50 ವರ್ಷಗಳ ಕಾಲ ರಾಜಕೀಯ ಜೀವನದಲ್ಲಿ ಮುಖ್ಯಮಂತ್ರಿ ಆಗಿ ರೈತ ಪರವಾಗಿ ರಾಜ್ಯದ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿರುವ ಅವರು ರೈತರ ಸಾಲಮನ್ನಾ, ಹೆಣ್ಣುಮಕ್ಕಳಿಗೆ ಭಾಗ್ಯಲಕ್ಷ್ಮಿ ಬಾಂಡ್, ಬಡಮಕ್ಕಳಿಗೆ ಸೈಕಲ್ ವಿತರಣೆಯಂತಹ ಜನಪರ ಯೋಜನೆ ಗಳನ್ನು ಜಾರಿಗೆ ತಂದಿದ್ದಾರೆ.

ಬಿಜೆಪಿ ಜಿಲ್ಲಾಧ್ಯಕ್ಷರಾದ ಸೀಕಲ್ ರಾಮಚಂದ್ರಗೌಡ ಅವರ ನೇತೃತ್ವದಲ್ಲಿ ಮುಂದಿನ ದಿನಗಳಲ್ಲಿ ಶಿಡ್ಲಘಟ್ಟ ಕ್ಷೇತ್ರದಲ್ಲಿ ಬಿಜೆಪಿ ಪಕ್ಷವನ್ನು ಅಧಿಕಾರಕ್ಕೆ ತರುವ ಗುರಿ ಹೊಂದಲಾಗಿದೆ. ಮೋದಿ ಮತ್ತು ಅಮಿತ್ ಶಾ ನೇತೃತ್ವದಲ್ಲಿ ಇಡೀ ದೇಶದಲ್ಲಿ ಸಂಪೂರ್ಣ ಕೇಸರಿಮಯವಾಗುತ್ತಿದೆ. ಇದಕ್ಕೆ ಇತ್ತೀಚೆಗೆ ನಡೆದ ಪಂಚ ರಾಜ್ಯಗಳ ಚುನಾವಣೆಯಲ್ಲಿ ಮೂರು ರಾಜ್ಯಗಳಲ್ಲಿ ಬಿಜೆಪಿ ಬಹುಮತದೊಂದಿಗೆ ಅಧಿಕಾರಕ್ಕೆ ಬರುತ್ತಿದೆ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಪುರುಷೋತ್ತಮ್, ಪ್ರತಾಪ್, ರಾಮಕೃಷ್ಣಪ್ಪ, ಕೃಷ್ಣಪ್ಪ, ಸಂಪತ್, ಬಾಲಕೃಷ್ಣ, ಆನಂದ್, ಜಯಂತಿ ಗ್ರಾಮನಾರಾಯಣಸ್ವಾಮಿ, ದೇವರಾಜ್, ಚಂದ್ರು ಮತ್ತಿತರರು ಹಾಜರಿದ್ದರು.



ಅಭಿಮಾನೋತ್ಸವದಲ್ಲಿ ಪಾಲ್ಗೊಳ್ಳಲು ತೆರಳುತ್ತಿರುವ ಕಾರ್ಯಕರ್ತರನ್ನು ಬೀಳ್ಕೊಟ್ಟ ಬಿಜೆಪಿ ಗ್ರಾಮಾಂತರ ಮಂಡಲ ಅಧ್ಯಕ್ಷ ಸೀಕಲ್ ಆನಂದ ಗೌಡ.

ಬೈಕ್ ಕಳ್ಳನ ಬಂಧನ: 5 ಬೈಕ್‌ಗಳ ವಶ

ಶಿಡ್ಲಘಟ್ಟ: ನಗರದ ಪೊಲೀಸರು ದ್ವಿಚಕ್ರ ವಾಹನ ಕಳ್ಳನನ್ನು ಬಂಧಿಸಿ 5 ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಂಡಿದ್ದಾರೆ. ಸರ್ಕಾರಿ ಆಸ್ಪತ್ರೆಯ ಬಳಿ ನಿಲ್ಲಿಸಿದ್ದ ದ್ವಿಚಕ್ರ ವಾಹನ ಕಳ್ಳತನವಾಗಿರುವ ಬಗ್ಗೆ ದೂರು ನೀಡಿದ್ದ ಹಿನ್ನೆಲೆಯಲ್ಲಿ ಆರಕ್ಷಕ ವೃತ್ತ ನಿರೀಕ್ಷಕ ಜೆ.ಎನ್. ಆನಂದ್ ಕುಮಾರ್‌ನೇತೃತ್ವದಲ್ಲಿ ನಗರ ಠಾಣೆಯ ಪಿಎಸ್‌ಐ ವೇಣುಗೋಪಾ ಲ್ ಮತ್ತು ಅವರ ಸಿಬ್ಬಂದಿಕಟ್ಟುನಿಟ್ಟಿನಕಾರ್ಯಾಚರಣೆ ನಡೆಸಿದ್ದರು. ಈ ವೇಳೆ ಪೊಲೀಸರು ಜಿಲ್ಲೆಯ ಶ್ರೀನಿವಾ ಸಪುರ ನಗರದ ನಿವಾಸಿ ಸೈಯದ್ ಯಾಸಿನ್ ಪಾಷಾ ಎಂಬುವನನ್ನು ವಶಕ್ಕೆ ಪಡೆದು, ತನಿಖೆ ನಡೆಸಿ ಅವನಿಂದ ನೋಂದಣಿ ಸಂಖ್ಯೆ ಇಲ್ಲದ 5 ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ.

ಬಾಗೇಪಲ್ಲಿ ಆಸ್ಪತ್ರೆ ಅವ್ಯವಸ್ಥೆ ವಿರುದ್ಧ ಆಕ್ರೋಶ

ರೋಗಿಗಳ ಸಾವಿನ ವಿರುದ್ಧ ಕ್ರಮಕ್ಕೆ ಆಗ್ರಹ | ಡಿವೈಎಫ್‌ಐ ಮುಖಂಡರ ನೇತೃತ್ವದ ಸಭೆ

• **ಕನ್ನಡಪ್ರಭ ವಾರ್ತೆ** ಬಾಗೇಪಲ್ಲಿ

ಸರ್ಕಾರಿ ಆಸ್ಪತ್ರೆಯಲ್ಲಿ ಬಡ ರೋಗಿಗಳ ಸಾವು ಸಂಭವಿಸಿ 10 ದಿನಗಳು ಕಳೆದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಡಿವೈಎಫ್‌ಐ ಜಿಲ್ಲಾ ಮುಖಂಡ ರಾಜಶೇಖರ್‌ಅವರು ಜಿಲ್ಲಾ ಆರೋಗ್ಯ ವೈದ್ಯಾಧಿಕಾರಿ ಡಾ. ಮಹೇಶ್ ಕುಮಾರ್ ಅವರನ್ನು ತರಾಟೆಗೆ ತೆಗೆದುಕೊಂಡ ಘಟನೆ ನಡೆಯಿತು.

ಪಟ್ಟಣದ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಯಲ್ಲಿ ಡಿವೈಎಫ್ ಐ ಮುಖಂಡರ ನೇತೃತ್ವದಲ್ಲಿ ಹಮ್ಮಿಕೊಂಡಿದ್ದ ಸಭೆಯಲ್ಲಿ ಮಾತನಾಡಿದ ಅವರು, ಇಲ್ಲಿನ ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯರ ನಿರ್ಲಕ್ಷ್ಯದಿಂದಾಗಿ ಬಡ ರೋಗಿಗಳ ಸಾವು ಸಂಭವಿಸಿ 10 ದಿನಗಳೇ ಕಳೆದಿವೆ. ಆದರೆ ಇದುವರೆವಿಗೂ ಮೃತ ಕುಟುಂಬ ಗಳಿಗೆ ಯಾವುದೇ ಪರಿಹಾರ ಸಿಕ್ಕಿಲ್ಲ, ರೋಗಿಗಳ ಸಾವಿಗೆ ಕಾರಣವಾಗಿರುವ ವೈದ್ಯರ ವಿರುದ್ಧ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ತಕ್ಷಣ ಖಾಲಿ ಇರುವ ವೈದ್ಯರು ಸೇರಿ ಸಿಬ್ಬಂದಿ ಹುದ್ದೆಗಳನ್ನು ಭರ್ತಿ ಮಾಡಬೇಕು, ಪ್ರಾಣ ಕಳೆದುಕೊಂಡಿರುವ ಕುಟುಂಬ ಗಳಿಗೆ ಪರಿಹಾರ ಕಲ್ಪಿಸಬೇಕು. ಆಸ್ಪತೆಗೆ ಬರುವ ಬಡರೋಗಿ ಗಳಿಗೆ ಮೂಲ ಸೌಲಭ್ಯ ಒದಗಿಸುವುದು ಸೇರಿ ಇಲ್ಲಿನ ಸಮಸ್ಯೆಗಳ ಬಗೆಹರಿಸಬೇಕು. ಇಲ್ಲದಿದ್ದರೆ ಮುಂದಿನ ದಿನ ಗಳಲ್ಲಿ ಸಂಘಟನೆ ವತಿಯಿಂದ ಉಗ್ರ ಹೋರಾಟಕ್ಕೆ ಮುಂದಾಗಬೇಕಾಗುತ್ತೆ ಎಂದು ಎಚ್ಚರಿಕೆ ನೀಡಿದರು.

ಡಿಎಚ್‌ಒ ಡಾ. ಮಹೇಶ್ ಕುಮಾರ್‌ಮಾತನಾಡಿ, ರೋಗಿ ಗಳ ಸಾವಿನ ಪ್ರಕರಣವನ್ನು ತನಿಖೆ ನಡೆಸಲು ಜಿಲ್ಲಾ ನೋಡಲ್ ಅಧಿಕಾರಿಗಳ ಸಮಿತಿ ರಚಿಸಲಾಗಿದ್ದು, ತನಿಖಾ ವರದಿ ಬಂದ ತಕ್ಷಣ ಕಾನೂನು ಕ್ರಮ ಜರುಗಿಸಲಾಗುವುದು.

ಪಟ್ಟಣ ಸೇರಿದಂತೆ ತಾಲೂಕಿನ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳ ಭರ್ತಿಗಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಸರ್ಕಾರ ಮುಂದಿನ ಕೌನ್ಸೆಲಿಂಗ್ ನಲ್ಲಿ ಖಾಲಿ ಹುದ್ದೆ ತುಂಬುವ ಭರವಸೆ ನೀಡಿರುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಸಿಪಿಎಂ ಮುಖಂಡ ಚೆನ್ನರಾಯಪ್ಪ, ಪ್ರಭಾರ ತಾಲೂಕು ಆರೋಗ್ಯ ವೈದ್ಯಾಧಿಕಾರಿ ಸಜೀತ್‌ರೆಡ್ಡಿ, ಆಡಳಿತಾಧಿಕಾರಿ ವಿನಯ್ ಕುಮಾರ್, ಡಿವೈಎಫ್‌ಐ ಜಿಲ್ಲಾಧ್ಯಕ್ಷ ವೈ.ಎನ್. ಹರೀಶ್ ಡಿವೈಎಫ್‌ಐ ಮತ್ತು ಸಿಪಿಎಂ ಮುಖಂಡರಾದ ಡಿ.ಟಿ. ಮುನಿಸ್ವಾಮಿ, ಸೋಮಶೇಖರ್, ಎನ್.ಗಣೇಶ್, ಸುನಿಲ್, ಆನಂದ್ ಮತ್ತಿತರರು ಇದ್ದರು.



ಸಭೆಯಲ್ಲಿ ಡಿವೈಎಫ್‌ಐ ಮುಖಂಡರೊಂದಿಗೆ ಜಿಲ್ಲಾ ಆರೋಗ್ಯ ವೈದ್ಯಾಧಿಕಾರಿ ಡಾ. ಮಹೇಶ್ ಕುಮಾರ್‌ಚರ್ಚೆ ನಡೆಸಿದರು.

ಜಂಟಿ ಸರ್ವೆ ನಕ್ಷೆ ಸಹಿಗಾಗಿ ಪ್ರತಿಭಟನೆ

ಕೋಲಾರ ತಹಸೀಲ್ದಾರ್ ಕಚೇರಿ ಮುಂದೆ ರೈತರಿಂದ ಅನಿರ್ದಿಷ್ಟಾವದಿ ಧರಣಿ

• **ಕನ್ನಡಪ್ರಭ ವಾರ್ತೆ** ಕೋಲಾರ

ಅರಣ್ಯ ಇಲಾಖೆಯಿಂದ ಕಂದಾಯ ಭೂಮಿ 180 ಎಕರೆ ಜೊತೆಗೆ ರೈತರ ಹಿಡುವಳಿ ಜಮೀನು 200 ಎಕರೆ ನಾಶ ಮಾಡಿದ್ದಾರೆ ಎಂದು ಜಂಟಿ ಸರ್ವೆಯಲ್ಲಿ ಸಾಬೀತಾಗಿದ್ದು, ಕೂಡಲೇ ತಹಸೀಲ್ದಾರ್‌ನಕ್ಷೆಗೆ ಸಹಿ ಮಾಡಿ ರೈತರಿಗೆಮತ್ತು ಅರಣ್ಯ ಇಲಾಖೆಗೆನೀಡುವಂತೆ ಒತ್ತಾಯಿಸಿ ಭೂ ಸಂತ್ರಸ್ತರ ಹೋರಾಟ ಸಮಿತಿ, ಪ್ರಾಂತ ರೈತ ಸಂಘ ಹಾಗೂ ರೈತರು ಶುಕ್ರವಾರ ತಹಸೀಲ್ದಾರ್‌ಕಚೇರಿ ಮುಂದೆ ಅನಿರ್ದಿಷ್ಟಾವಧಿ ಧರಣಿ ನಡೆಸಿದರು.

ಭೂ ಸಂತ್ರಸ್ತರ ಹೋರಾಟ ಸಮಿತಿ ಸಂಚಾಲಕ ಆರ್. ಶ್ರೀನಿವಾಸನ್ ಮಾತನಾಡಿ, ಹುತ್ತೂರು ಹೋಬಳಿ ಶಿಳ್ಳಂಗೆರೆ, ಹರಟಿ, ಮಲ್ಲಂಡಹಳ್ಳಿ, ಕೋಟಿಗಾನಹಳ್ಳಿ, ಅಬ್ಬಣಿ ಹಾಗೂ ಹರಳಕುಂಟೆ ಜಮೀನುಗಳ ಕಂದಾಯ ದಾಖಲೆಗಳನ್ನು ಮತ್ತು ಅರಣ್ಯ ಇಲಾಖೆಯ 1941 ಫಾರೆಸ್ಟ್‌ಸೆಟಲ್ಮೆಂಟ್ ಕಾಫಿ ಪರಿಶೀಲಿಸದೆ ಅಂದಿನ ಭೂ ದಾಖಲೆಗಳ ಸರ್ವೆಯರ್ ಮತ್ತು ಅರಣ್ಯ ಅಧಿಕಾರಿಗಳು 100 ವರ್ಷದ ಹಿಂದಿನ ದಾಖಲೆ ಮರೆಮಾಚಿ ರೈತರಿಗೆ ನೀಡಿದ ಕಂದಾಯ ಭೂಮಿಯಲ್ಲಿನ ಬೆಳೆಗಳನ್ನು ನಾಶ ಮಾಡಿ ರೈತರಿಗೆ ತೊಂದರೆ ಕೊಟ್ಟಿದ್ದಾರೆ ಆರೋಪಿಸಿದರು.

ಭೂ ಸಂತ್ರಸ್ತರ ಹೋರಾಟ ಸಮಿತಿಯ ಸಂಚಾಲಕ ಸಿಪಿಎಂ ಗೋಪಾಲ್, ಹರಟಿ ಪ್ರಕಾಶ್, ಸಿಐಟಿಯು ಜಿಲ್ಲಾ ಉಪಾಧ್ಯಕ್ಷ ಗಾಂಧಿನಗರ ನಾರಾಯಣಸ್ವಾಮಿ, ಕರ್ನಾಟಕ ಪ್ರಾಂತ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಪಿ.ಆರ್. ಸೂರ್ಯನಾರಾಯಣ, ಜಿಲ್ಲಾಧ್ಯಕ್ಷ ಎನ್. ಎನ್.ಶ್ರೀರಾಮ್, ತಾಲೂಕು ಅಧ್ಯಕ್ಷ ವೆಂಕಟೇಶಪ್ಪ, ಕಾರ್ಯದರ್ಶಿ ನಾರಾಯಣರೆಡ್ಡಿ, ಜಿಲ್ಲಾ ಮುಖಂಡರಾದ ಶ್ರೀಧರ್, ಸೋಮಶೇಖರ್‌ಗೌಡ, ಚಿನ್ನಮ್ಮ, ಬಿ.ಜಿ.ಆನಂದ್, ವೆಂಕಟರಮಣಪ್ಪ, ಭಟ್ರಹಳ್ಳಿ ಮಂಜುನಾಥ್, ಶ್ರೀನಿವಾಸ್ ಇದ್ದರು.



ರೈತರು ಶುಕ್ರವಾರ ತಹಸೀಲ್ದಾರ್‌ಕಚೇರಿ ಮುಂದೆ ಅನಿರ್ದಿಷ್ಟಾವಧಿ ಧರಣಿ ನಡೆಸಿದರು.

ಪುರಸಭಾ ಕಾರ್ಯಾಲಯ, ಬಿಡದಿ

ಬಿಡದಿ ಮುಖ್ಯ ರಸ್ತೆ, ರಾಮನಗರ ತಾಲ್ಲೂಕು, ಬೆಂಗಳೂರು ದಕ್ಷಿಣ ಜಿಲ್ಲೆ – 562109
ದೂರವಾಣಿ : 080–27282572 e-mail: ka.bidadi.tmc@gmail.com
website: http://www.bidaditown.mrc.gov.in

ಸಂ: ಪುಕಾಬಿ/ಆ.ಶಾ/ಇ–ಟೆಂಡರ್/ಸಿಆರ್/02/2025–26 ದಿನಾಂಕ: 08.05.2026

ಅಲ್ಪಾವಧಿ ಮರು ಟೆಂಡರ್ ಪ್ರಕಟಣೆ (ಕೆ.ಪಿ.ಪಿ.ಪಿ. ಪೋರ್ಟಲ್ ಮುಖಾಂತರ ಮಾತ್ರ)

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಆದ್ಯಾದೇಶ 1999–2000ರ ಪ್ರಕಾರ ಆಕ್ಟ್ 2000ರ ನಿಯಮದಂತೆ ಸ್ಟ್ಯಾಂಡರ್ಡ್ ಟೆಂಡರ್ ಡಾಕ್ಯೂಮೆಂಟ್‌ನ ಕೆ.ಪಿ.ಪಿ.ಪಿ. ಪೋರ್ಟಲ್ ಮುಖಾಂತರ **ಪುರಸಭಾ ನಿಧಿ ಅನುದಾನದಡಿ** ಟೆಂಡರ್‌ನ್ನು ಆಹ್ವಾನಿಸಿದ್ದು. ಅರ್ಹ ಗುತ್ತಿಗೆದಾರರು ಕೆ.ಪಿ.ಪಿ.ಪಿ ಪೋರ್ಟಲ್ **https://kppp.karnataka.gov.in** ಮುಖಾಂತರ ಕರೆದಿರುವ ಟೆಂಡರ್‌ನಲ್ಲಿ ಭಾಗವಹಿಸಬಹುದು. ಮುಂದುವರೆದಂತೆ ಇಂಡೆಂಟ್ ನಂ ಹಾಗೂ ಅಂದಾಜು ಮೊತ್ತಗಳಂತೆ **(1)** DMA/2025-26/SE5674/CALL-3 (Other, **73.54 Lakhs** EMD - **147082/-**) ಗಳಿದ್ದು, ಕೆ.ಪಿ.ಪಿ.ಪಿ. ಪೋರ್ಟಲ್ **https://kppp.karnataka.gov.in** ಮುಖಾಂತರ ಡೌನ್‌ಲೋಡ್ ಮಾಡಿಕೊಂಡು **ದಿನಾಂಕ: 16.05.2026ರ ಸಂಜೆ 5:30 ಗಂಟೆ ಒಳಗಾಗಿ ಅಪ್‌ಲೋಡ್** ಮಾಡಬಹುದಾಗಿರುತ್ತದೆ. ಟೆಂಡರ್ ದಾಖಲೆಗಳಲ್ಲಿ ತಿಳಿಸಿರುವಂತೆ ಎಲ್ಲಾ ಅಗತ್ಯ ದಾಖಲೆಗಳನ್ನು ಸಲ್ಲಿಸುವುದು. ಹೆಚ್ಚಿನ ವಿವರಗಳನ್ನು ಈ ಕಛೇರಿಯ ಆರೋಗ್ಯ ಶಾಖೆಯಿಂದ ಪಡೆಯಬಹುದು.

ಸಹಿ/– **ಅಧ್ಯಕ್ಷರು**, ಪುರಸಭೆ, ಬಿಡದಿ
ಸಹಿ/– **ಮುಖ್ಯಾಧಿಕಾರಿ**, ಪುರಸಭೆ, ಬಿಡದಿ
DIPR/BSD/51/SA/2026-27

ಕರ್ನಾಟಕ ಸರ್ಕಾರ

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ

6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560003.
ದೂರವಾಣಿ: 080–23349434, e-mail: dpikseab@gmail.com
ಸಂಖ್ಯೆ: KSEAB/DPIE/B4(OTR)/1/2026-BSEC/90135 ದಿನಾಂಕ: 08.05.2026

ಇ–ಟೆಂಡರ್ ಪ್ರಕಟಣೆ

ನಿರ್ದೇಶಕರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಇವರು **"2026 ನೇ ಸಾಲಿನ ಎಸ್.ಎಸ್.ಎಲ್.ಸಿ ಮತ್ತು ಇತರೆ ಪರೀಕ್ಷೆಗಳ ಪೂರ್ವ ಮುದ್ರಿತ ಉತ್ತೀರ್ಣ ಪ್ರಮಾಣಪತ್ರಗಳು, ಪರಿವರ್ತನೀಯ ದತ್ತಾಂಶಗಳ ಮೇಲುಮುದ್ರಣ ಸಹಿತ ಸರಬರಾಜು"** ಕಾರ್ಯಕ್ಕೆ ಅರ್ಹ ಸಂಸ್ಥೆಗಳಿಂದ ಇ–ಟೆಂಡರ್ ಅರ್ಜಿಗಳನ್ನು ಕೆ.ಟಿ.ಪಿ.ಪಿ. ಅಧಿನಿಯಮ–1999 ಮತ್ತು ಕೆ.ಟಿ.ಪಿ.ಪಿ. ನಿಯಮಗಳು–2000, ಅಡಿಯಲ್ಲಿ ಆಹ್ವಾನಿಸಲಾಗಿದೆ.

ಟೆಂಡರ್‌ಗಳನ್ನು ಕರ್ನಾಟಕ ಸರ್ಕಾರದ ಇ–ಸಂಗ್ರಹಣಾ ವೇದಿಕೆ ಮೂಲಕ ಮಾತ್ರ ಸಲ್ಲಿಸತಕ್ಕದ್ದು. ಟೆಂಡರ್ ದಸ್ತಾವೇಜುಗಳನ್ನು ಮಂಡಲಿಯ ಅಂತರ್ಜಾಲತಾಣ **https://Kseab.karnataka.gov.in** ಮತ್ತು **https://kppp.karnataka.gov.in** ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದು. ಟೆಂಡರ್ ಪ್ರಾರಂಭ **ದಿನಾಂಕ: 08.05.2026**, ಟೆಂಡರ್ ಪೂರ್ವ ಬಿಡ್ ಸಭೆ **ದಿನಾಂಕ: 15.05.2026ರ ಪೂರ್ವಾಹ್ನ 11.30 ಗಂಟೆ,** ಟೆಂಡರ್ ಸಲ್ಲಿಸಲು ಅಂತಿಮ **ದಿನಾಂಕ: 22.05.2026ರ ಸಂಜೆ 5.00 ಗಂಟೆ.** ತಾಂತ್ರಿಕ ಬಿಡ್ ತೆರೆಯುವ **ದಿನಾಂಕ: 25.05.2026ರ ಪೂರ್ವಾಹ್ನ 11.30 ಗಂಟೆ,** ವಾಣಿಜ್ಯ ಬಿಡ್ ತೆರೆಯುವ ತಾತ್ಕಾಲಿಕ **ದಿನಾಂಕ: 27.05.2026 ಪೂರ್ವಾಹ್ನ 11.30 ಗಂಟೆ,** ಸದರೀ ಟೆಂಡರ್‌ನ ಅಂದಾಜು ಮೌಲ್ಯ **ರೂ.30,14,000/–** ಮತ್ತು ಮುಂಗಡ ಠೇವಣಿ **ರೂ.60,280/– ಗಳಾಗಿದ್ದು** ಹೆಚ್ಚಿನ ವಿವರಗಳನ್ನು ಮಂಡಲಿಯಿಂದ ಕಛೇರಿ ವೇಳೆಯಲ್ಲಿ ಪಡೆಯಬಹುದಾಗಿರುತ್ತದೆ.

ಸಹಿ/– ನಿರ್ದೇಶಕರು, ಪರೀಕ್ಷೆಗಳು

ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮ ನಿಯಮಿತ

(ಕರ್ನಾಟಕ ಸರ್ಕಾರದ ಒಂದು ಉದ್ಯಮ)
ನಂ.45, 3ನೇ ಮಹಡಿ, ಕೆ.ಎಸ್.ಹೆಚ್.ಡಿ.ಸಿ.ಎಲ್ ಕಾಂಪ್ಲೆಕ್ಸ್, ಎಂ.ಜಿ.ರಸ್ತೆ, ಬೆಂಗಳೂರು–01. ದೂ: 080–25582656/ 71204445/ 71204446
ಇ–ಮೇಲ್: gmmkshdcl@gmail.com
ವೆಬ್‌ಸೈಟ್: http://www.cauverycrafts.com
ಕಡತದ ಸಂಖ್ಯೆ: ಕೆಎಸ್‌ಹೆಚ್‌ಡಿಸಿಎಲ್/ಎಂಕೆಟಿಜಿ/ಇ–ಟೆಂಡರ್/137/2026–27, ದಿನಾಂಕ: 08.05.2026
ಟೆಂಡರ್ ಉಲ್ಲೇಖ ಸಂಖ್ಯೆ: ಕೆಎಸ್‌ಹೆಚ್‌ಡಿಸಿಎಲ್/2026–27/ಐಎನ್‌ಡಿ0017

ಅಲ್ಪಾವಧಿ ಇ–ಟೆಂಡರ್ ಪ್ರಕಟಣೆ

ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮ ನಿಯಮಿತವು (ಕೆಎಸ್‌ಹೆಚ್‌ಡಿಸಿಎಲ್) ಪ್ರಕಟಣೆಯಲ್ಲಿ ನಿರ್ದಿಷ್ಟಪಡಿಸಿರುವ ವಿವರಣೆಯಂತೆ ಅನುಮೋದನೆ ಮೇಲೆ ಮಾರಾಟದ (ಎಸ್‌ಒಎ) ಆಧಾರದ ಮೇಲೆ **ಚಿನ್ನದ ಲೇಪನ ಮಾಡಿದ, ಗಂಡಬೇರುಂಡ ಇರುವ 92.5 ಸ್ಟರ್ಲಿಂಗ್ ಬೆಳ್ಳಿ ಪದಕಗಳು ಜೊತೆಗೆ ಅಗತ್ಯ ಸಹಾಯಕ ಭಾಗಗಳ ತಯಾರಿಕೆ ಮತ್ತು ಸರಬರಾಜಿಗಾಗಿ** ಅರ್ಹ ಟೆಂಡರುದಾರರುಗಳಿಂದ ದ್ವಿ ಲಕೋಟೆ ಟೆಂಡರ್ ಕ್ರಮದಲ್ಲಿ ಅಲ್ಪಾವಧಿ ಇ–ಟೆಂಡರ್ ಆಹ್ವಾನಿಸಿರುವುದು. ಟೆಂಡರ್ ಪ್ರಕಟಣೆ ವಿವರಗಳನ್ನು ವೆಬ್‌ಸೈಟ್: **www.kppp.karnataka.gov.in** ಇಲ್ಲಿಗೆ ಲಾಗಿನ್ ಆಗುವ ಮೂಲಕ ಇ–ಪ್ರೊಕ್ಯೂರ್‌ಮೆಂಟ್ ವಿಧಾನದಲ್ಲಿ ಪಡೆದುಕೊಳ್ಳಬಹುದು. ಟೆಂಡರ್ ದಸ್ತಾವೇಜುಗಳನ್ನು ಪಡೆಯಲು ಪ್ರಾರಂಭವಾಗುವ **ದಿನಾಂಕ: 08.05.2026.** ಬಿಡ್‌ಗಳನ್ನು ಸಲ್ಲಿಸುವ ಕಡೆಯ ದಿನಾಂಕ ಮತ್ತು ಸಮಯ: **15.05.2026.**

ಸಹಿ/– ಪ್ರಧಾನ ವ್ಯವಸ್ಥಾಪಕರು (ಮಾರುಕಟ್ಟೆ)

ಕರ್ನಾಟಕ ಸರ್ಕಾರ ಕರ್ನಾಟಕ ಅರಣ್ಯ ಇಲಾಖೆ

ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ, ಕಾರವಾರ ಉಪ–ವಿಭಾಗ, ಕಾರವಾರ

ಎಂಜಿ ರಸ್ತೆ, ಕಾಜುಬಾಗ, ಕಾರವಾರ–581301. (ಉ.ಕ.)
ದೂರವಾಣಿ: 08382–226365 ಇ–ಮೇಲ್: acfkwr@gmail.com
ನಂ. ಕಿ3/ಸಅಸಂ/ವಿವ–/ಇ–ಮರುಟೆಂಡರ್–6/2025–26 ದಿನಾಂಕ: 02–05–2026

ಟೆಂಡರ್ ಪ್ರಕಟಣೆ

2026–27ನೇ ಸಾಲಿಗೆ ವಿವಿಧ ಯೋಜನೆಯಡಿ 2026ನೇ ಮಳೆಗಾಲದಲ್ಲಿ ನೆಡುತೋಪು ರಚನೆ / ನಿರ್ವಹಣೆ, ನರ್ಸರಿ ಕಾಮಗಾರಿ ಇತ್ಯಾದಿ ಕಾಮಗಾರಿ ಸಂಕ್ಷಿಪ್ತ ಇ–ಟೆಂಡರ ಕರೆಯಲಾಗಿರುತ್ತದೆ. ಮರು ಇ–ಟೆಂಡರ್ ಸ್ವೀಕರಿಸುವ ಕೊನೆಯ ದಿನಾಂಕ: 12–05–2026 ಆಗಿದ್ದು, ಹೆಚ್ಚಿನ ಮಾಹಿತಿಗಾಗಿ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ, ಕಾರವಾರ ವಿಭಾಗ, ಕಾರವಾರ ರವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸುವದು. (ದೂರವಾಣಿ ಸಂಖ್ಯೆ: 08382–226365).

DIPR/KWR/KSMCA/113/26-27 Dt. 07.05.2026

ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ

GTTC
ರಾಜಾಜಿನಗರ ಕೈಗಾರಿಕಾ ವಸಾಹತು, ಬೆಂಗಳೂರು–560 010.
ದೂ.ಸಂ.: 080–23152118/119, 23384303,
ಫ್ಯಾಕ್ಸ್: 080–23301683, ವೆಬ್‌ಸೈಟ್: https://gttc.karnataka.gov.in

ಎಲೆಕ್ಟ್ರಾನಿಕ್ ಟೆಂಡರ್ ಪ್ರಕಟಣೆ

ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರವು (ಜಿಟಿಟಿಸಿ), **ಟರ್ನ್ ಕೀ ಆಧಾರದ ಮೇಲೆ ಇಂಡಸ್ಟ್ರಿಯಲ್ ಕಂಟ್ರೋಲ್ ಸಿಸ್ಟಮ್ ಮತ್ತು ಆಟೋಮೇಷನ್‌ನಲ್ಲಿ ಜಾಗತಿಕ ಸಾಮರ್ಥ್ಯ ಕೇಂದ್ರವನ್ನು ಸ್ಥಾಪಿಸಲು ಇ–ಟೆಂಡರ್ ಆಹ್ವಾನಿಸಿದೆ.** GTTC/MSDC/TENDER/ICS&ALab./BD-288/2025-26 ಇ–ಟೆಂಡರ್ ಮೂಲಕ ಆಫರ್‌ಗಳನ್ನು ಅಪ್‌ಲೋಡ್ ಮಾಡಲು **ಕೊನೆಯ ದಿನಾಂಕ: 10.06.2026.** ಇನ್ನಿತರೆ ವಿವರಗಳಿಗಾಗಿ ವೆಬ್‌ಸೈಟ್ **https://kppp.Karnataka.gov.in**ಗೆ ಲಾಗ್‌ಆನ್ ಆಗಿ. **ಸಹಾಯವಾಣಿ ಸಂಖ್ಯೆ : +91 9240214000, +91 9240214001.**

ಸಹಿ/– ಟೆಂಡರ್ ಆಹ್ವಾನಿಸುವ ಪ್ರಾಧಿಕಾರ

ಪುರಸಭಾ ಕಾರ್ಯಾಲಯ, ಪಿರಿಯಾಪಟ್ಟಣ

ಮೈಸೂರು ಜಿಲ್ಲೆ – 571107, ದೂ: 08223–273036
ಇ–ಮೇಲ್: itstaff_ulb_periyapatna@yahoo.com
ಸಂಖ್ಯೆ: ಪಿಪುಸ/ಪ.ಅ/ಟೆಂಡರ್–01–04/2026–27 ದಿನಾಂಕ: 06.05.2026

ಮರು ಟೆಂಡರ್ ಪ್ರಕಟಣೆ (ಕೆಪಿಪಿಪಿ ಪೋರ್ಟಲ್ ಮೂಲಕ)

ಪಿರಿಯಾಪಟ್ಟಣ ಪುರಸಭೆಯ ವಿವಿಧ ಸೇವೆಗಳನ್ನು ಅರ್ಹರಿಂದ ಪಡೆಯಲು 1999 ಹಾಗೂ 2000ರ ಪಾರದರ್ಶಕ ಕಾಯ್ದೆಗೆ ಒಳಪಟ್ಟು ಪ್ರತ್ಯೇಕವಾಗಿ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಟೆಂಡರ್‌ದಾರರು **https://kppp.karnataka.gov.in** ಪೋರ್ಟಲ್ ಮೂಲಕ ಟೆಂಡರ್ ಷರತ್ತು ಹಾಗೂ ದಸ್ತಾವೇಜನ್ನು ಡೌನ್‌ಲೋಡ್ ಮಾಡಿಕೊಂಡು ಆನ್‌ಲೈನ್ ಮುಖಾಂತರ ಟೆಂಡರ್‌ಗಳನ್ನು ಸಲ್ಲಿಸಬಹುದು. 1) ಟೆಂಡರ್‌ನ್ನು ಸಲ್ಲಿಸಲು ಕಡೆಯ **ದಿನಾಂಕ: 21.05.2026 ಸಂಜೆ 5:00 ಗಂಟೆಯವರೆಗೆ.** 2) ಟೆಂಡರ್ ತೆರೆಯುವ **ದಿನಾಂಕ: 22.05.2026ರ ಬೆಳಿಗ್ಗೆ 11.00 ಗಂಟೆಗೆ** ಅಥವಾ ಮುಂದೆ ಸೂಚಿಸುವ ದಿನಾಂಕದಂದು ತೆರೆಯಲಾಗುವುದು.

ಕ್ರ ಸಂ.	ವಿವರ	ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)	ಇ.ಎಂ.ಡಿ ಮೊತ್ತ (ರೂ.ಗಳಲ್ಲಿ)	ಕಾಲಾವಧಿ
1	DMA/2026-27/SE7686/CALL-2	16.10	40250	12 ತಿಂಗಳು
2	DMA/2026-27/SE7671/CALL-2	6.38	15970	12 ತಿಂಗಳು

ಸೂಚನೆ: 1) ಕಾರಣಾಂತರಗಳಿಂದ ಮೇಲೆ ತಿಳಿಸಿದ ಟೆಂಡರ್ ದಿನಾಂಕಗಳು ಹಾಗೂ ಇತರೆ ಬದಲಾವಣೆಗಳಾದಲ್ಲಿ ದಿನಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ, ಕೆಪಿಪಿಪಿ ಪೋರ್ಟಲ್‌ನಲ್ಲಿ ಸೂಚಿಸಲಾಗುವುದು. ಹೆಚ್ಚಿನ ವಿವರಗಳನ್ನು ಗುತ್ತಿಗೆದಾರರು **https://kppp.karnataka.gov.in** ಪೋರ್ಟಲ್‌ನಲ್ಲಿ ನೋಡಿಕೊಳ್ಳುವುದು.

ಸಹಿ/– ಮುಖ್ಯಾಧಿಕಾರಿ, ಪುರಸಭೆ, ಪಿರಿಯಾಪಟ್ಟಣ
DIPR/MYS/148/SA/2026-27

ಕರ್ನಾಟಕ ಸರ್ಕಾರ

ಕರ್ನಾಟಕ ಮೃಗಾಲಯ ಪ್ರಾಧಿಕಾರ
ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳವರ/ ಉಪ ನಿರ್ದೇಶಕರವರ ಕಾರ್ಯಾಲಯ ಮಕ್ಕಳ ಉದ್ಯಾನವನ ಮತ್ತು ಕಿರು ಮೃಗಾಲಯ ಕಲಬುರಗಿ

ಇಮೇಲ್: dcf_tgulbarga@yahoo.co.in ಕಛೇರಿ ದೂ. ಸಂ. 08472-256601
ಸಂಖ್ಯೆ: ಉನಿ/ಕಿ.ಮೃ/ಹೊರಗುತ್ತಿಗೆ ನೌಕರರ/ಟೆಂಡರ್/ಸಿ.ಆರ್/2026–27 ದಿನಾಂಕ : 07–05–2026

:: ಅಲ್ಪಾವಧಿಯ ಇ–ಟೆಂಡರ್ ಪ್ರಕಟಣೆ ::

(**Karnataka Public Procurement Portal** ನಡಿಯಲ್ಲಿ ಮಾತ್ರ)

ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು/ಉಪ ನಿರ್ದೇಶಕರು ಮಕ್ಕಳ ಉದ್ಯಾನವನ ಮತ್ತು ಕಿರು ಮೃಗಾಲಯ ಕಲಬುರಗಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸಲು ಮಾನವ ಸಂಪನ್ಮೂಲ ಒದಗಿಸುವ ಟೆಂಡರನ್ನು Karnataka Public Procurement Portal ನಡಿಯಲ್ಲಿ ಆಹ್ವಾನಿಸಲಾಗಿದ್ದು. **ಸದರಿ ವಿವರ ಈ ಕೆಳಗಿನಂತಿವೆ.**
ವಿವರ : ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು/ಉಪ ನಿರ್ದೇಶಕರು ಮಕ್ಕಳ ಉದ್ಯಾನವನ ಮತ್ತು ಕಿರು ಮೃಗಾಲಯ ಕಲಬುರಗಿ ರವರಿಂದ ಇ–ಟೆಂಡರ್ ಆಹ್ವಾನಿಸಲಾಗಿದೆ.
1) ಕಾಮಗಾರಿ : ಮಕ್ಕಳ ಉದ್ಯಾನವನ ಮತ್ತು ಕಿರು ಮೃಗಾಲಯ ಕಲಬುರಗಿ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸಲು ಮಾನವ ಸಂಪನ್ಮೂಲ ಒದಗಿಸುವ ಟೆಂಡರ್, 2) ಟೆಂಡರ್‌ಗಿಟ್ಟ ಮೊತ್ತ : **ಕನಿಷ್ಠ ರೂ. 57.00 ಲಕ್ಷ, ಗರಿಷ್ಠ ರೂ. 57.00 ಲಕ್ಷ,** 3) ಲೆಕ್ಕ ಶೀರ್ಷಿಕೆ : ZAK, 4) ಅರ್ಹತೆ : As per tender documents, 5) ಟೆಂಡರ್‌ಗೆ ಸಂಬಂಧಿಸಿದಂತೆ, ಪ್ರಶ್ನೆಗಳು ಮತ್ತು ಸ್ಪಷ್ಟೀಕರಣ ಕೇಳಲು ಕೊನೆಯ ದಿನಾಂಕ : **13–05–2026 ಸಾಯಂಕಾಲ 4.00 ಗಂಟೆಗೆ,** 6) ತಾಂತ್ರಿಕ ಹಾಗೂ ಆರ್ಥಿಕ ಬಿಡ್‌ಗಳನ್ನು ಸಲ್ಲಿಸಲು ಕೊನೆಯ ದಿನಾಂಕ : **14–05–2026 ಸಾಯಂಕಾಲ 4.00 ಗಂಟೆಗೆ,** 7) ತಾಂತ್ರಿಕ ಬಿಡ್‌ಗಳನ್ನು ತೆರೆಯುವ ದಿನಾಂಕ: **15–05–2026 ರಂದು ಸಾಯಂಕಾಲ 4.30 ಗಂಟೆಗೆ,** 8) ಆರ್ಥಿಕ ಬಿಡ್‌ಗಳನ್ನು ತೆರೆಯುವ ದಿನಾಂಕ: **17–05–2026 ರಂದು ಸಾಯಂಕಾಲ 5.00 ಗಂಟೆಗೆ,** 9) ಹೆಚ್ಚಿನ ವಿವರಗಳಿಗಾಗಿ ಸಂಪರ್ಕಿಸಬೇಕಾದ ವಿಳಾಸ : ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು/ಉಪ ನಿರ್ದೇಶಕರು ಮಕ್ಕಳ ಉದ್ಯಾನವನ ಮತ್ತು ಕಿರು ಮೃಗಾಲಯ ಕಲಬುರಗಿ, ಎಸ್.ಬಿ. ಟೆಂಪಲ್ ರೋಡ, ಕಲಬುರಗಿ. 10) ಅಂತರಜಾಲ ತಾಣದ ವಿಳಾಸ : http:kppp.karnataka.gov.in

ಸಹಿ/– ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು/ಉಪ ನಿರ್ದೇಶಕರು ಮಕ್ಕಳ ಉದ್ಯಾನವನ ಮತ್ತು ಕಿರು ಮೃಗಾಲಯ ಕಲಬುರಗಿ
ವಾ.ಸಾ.ಸಂ.ಇ/ಕಲಬುರಗಿ/102/ಕೆ.ಎಸ್.ಎಂ.ಸಿ.&ಎ/2026–27

ಕರ್ನಾಟಕ ಸರ್ಕಾರ

ಕಾರ್ಯಾಲಯ ಕಾರ್ಯನಿರ್ವಾಹಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬೀದರ.

ಸಂ: ಕಾನಿಅ/ಪಂರಾಇಂವಿ/ಬೀದರ/ತಾಶಾ–2/2026–27/159 ದಿನಾಂಕ: 07.05.2026

ಅಲ್ಪಾವಧಿ ಟೆಂಡರ್ ಪ್ರಕಟಣೆ, (ಇ–ಪ್ರೊಕ್ಯೂರಮೆಂಟ್)

ಕರ್ನಾಟಕ ರಾಜ್ಯಪಾಲರ ಪರವಾಗಿ ಕಾರ್ಯನಿರ್ವಾಹಕ ಅಭಿಯಂತರರು, ಪಂಚಾಯತ ರಾಜ್ ಇಂಜಿನಿಯರಿಂಗ ವಿಭಾಗ, ಬೀದರ ಇವರಿಂದ ವಿವಿಧ ಯೋಜನೆಯಡಿ ಮಂಜೂರಾದ 27 ಕಾಮಗಾರಿಗಳಿಗೆ (ಕನಿಷ್ಠ **ರೂ. 4,15,820.42** (Rupees Four Lakhs Fifteen Thousand Eight Hundred Twenty and paise forty two only) ಮತ್ತು ಗರಿಷ್ಠ **167,84,805.38 ಮೊತ್ತದ** (Rupees One Crore Sixty Seven Lakhs Eighty Four Thousand Eight Hundred Five and paise thirty eight only) ಗುತ್ತಿಗೆದಾರರನ್ನು ನೇಮಿಸಲು, ಲೋಕೋಪಯೋಗಿ ಇಲಾಖೆಯಲ್ಲಿ ನೋಂದಾಯಿತ ಅರ್ಹ ಗುತ್ತಿಗೆದಾರರಿಂದ ಕೆ.ಟಿ.ಪಿ.ಪಿ. ಕಾಯ್ದೆ ಹಾಗೂ ಕೆ.ಡಬ್ಲ್ಯೂ–01, 02, 03 ಹಾಗೂ 04ರ ನಿಬಂಧನೆಗೊಳಪಟ್ಟು ಕೆ.ಪಿ.ಪಿ.ಪಿ.ನಲ್ಲಿ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ವಿವರಗಳಿಗಾಗಿ ಅಂತರಜಾಲ ತಾಣ https://kppp.karnataka.gov.inನ್ನು ಸಂಪರ್ಕಿಸಬಹುದು.(Work Indent No:– 26578, 26406, 26564, 26561, 26547, 26013, 26247, 25188, 25189, 25190, 26293, 26291, 26289, 21574/CALL–2, 26405, 26546, 26545, 26442, 26441, 26440, 26439, 25393/CALL-2, 25447, 26548, 26580, 24965/CALL–2, 24968/CALL–2). ಟೆಂಡರ್ ಪ್ರಕ್ರಿಯೆ ದಿನಾಂಕಗಳು: 1. ಇ–ಪ್ರಾಕ್‌ನಲ್ಲಿ ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ : 08.05.2026 ರಿಂದ 18.05.2026 16:00 ಗಂಟೆವರೆಗೆ 2. ತಾಂತ್ರಿಕ ಬಿಡ್ ತೆರೆಯುವ ದಿನಾಂಕ : 19.05.2026 ರಂದು 16:00 ಗಂಟೆ ನಂತರ 3. ಅರ್ಥಿಕ ಬಿಡ್ ತೆರೆಯುವ ದಿನಾಂಕ : 22.05.2026 ರಂದು 11:00 ಗಂಟೆ ನಂತರ

ಸಹಿ/–ಕಾರ್ಯನಿರ್ವಾಹಕ ಅಭಿಯಂತರರು, ಪಂ.ರಾ.ಇಂ. ವಿಭಾಗ, ಬೀದರ.
ವಾ.ಸಾ.ಸಂ.ಇ/ಬೀದರ/30/ಕೆ.ಎಸ್.ಎಂ.ಸಿ.&ಎ/2026–27

ಕರ್ನಾಟಕ ಸರ್ಕಾರ

ಮುಖ್ಯಕಾರ್ಯನಿರ್ವಹಣಾಧಿಕಾರಿಗಳ ಕಛೇರಿ, ಪಿ.ಎಂ ಪೋಷಣ್ ಶಕ್ತಿ ನಿರ್ಮಾಣ್ (ಮ.ಉ.ಯೋ) ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ.

email: eokodagumms@gmail.com
ಅದಾ:ಆಹಾರ ಸಾಗಾಣಿಕೆ ಟೆಂಡರ್/11/2025–26 ದಿನಾಂಕ:06.05.2026

ಆಹಾರ ಸಾಗಾಣಿಕೆ ಟೆಂಡರ್ e-procurement ಪ್ರಕಟಣೆ

ಕೊಡಗು ಜಿಲ್ಲೆಯ ಮೂರು ತಾಲ್ಲೂಕುಗಳ ಕೆ.ಎಫ್.ಸಿ.ಎಸ್.ಸಿ ಗೋದಾಮಿನಿಂದ ಅಕ್ಕಿ, ಗೋಧಿ, ತೊಗರಿಬೇಳೆ, ಸೂರ್ಯಕಾಂತಿ ಎಣ್ಣೆ ಆಹಾರ ಸಾಮಾಗ್ರಿಗಳನ್ನು ಆಯಾ ತಾಲ್ಲೂಕುಗಳ ಸರ್ಕಾರಿ ಮತ್ತು ಅನುದಾನಿತ ಶಾಲಾ ಅಡುಗೆ ಕೇಂದ್ರಗಳಿಗೆ ಸರಬರಾಜು ಮಾಡಲು ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳು, ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿರವರಿಂದ ತಾಲ್ಲೂಕುವಾರು ಟೆಂಡರ್‌ಗಳನ್ನು e-procurement ಮೂಲಕ ಆಹ್ವಾನಿಸಲಾಗಿದೆ. (www.kppp.karnataka.gov.in) ಆಸಕ್ತಿಯುಳ್ಳವರು ಆರ್.ಸಿ ಹೊಂದಿದ (ಆರ್.ಟಿ.ಓ ಕಛೇರಿಯಲ್ಲಿ ನೊಂದಾಯಿಸಲ್ಪಟ್ಟ) ಲಾರಿ ಮಾಲಿಕರು, ಟೆಂಡರ್ ಹಾಕಲು ಇಚ್ಛೆ ಉಳ್ಳವರು KPPP portal ರಲ್ಲಿ ತಿಳಿಸಿದಂತೆ Tender Processing Fee ಯನ್ನು ಆನ್‌ಲೈನ್ ಮೂಲಕ ಸಲ್ಲಿಸತಕ್ಕದ್ದು, ಹೆಚ್ಚಿನ ವಿವರಗಳಿಗಾಗಿ www.eproc.karnataka.gov.in ಮೂಲಕ ಮಾಹಿತಿಯನ್ನು ಪಡೆಯಬಹುದಾಗಿದೆ.

1	ಟೆಂಡರ್ ಸಲ್ಲಿಸಲು ಪ್ರಾರಂಭ ದಿನಾಂಕ	ದಿನಾಂಕ:11.05.2026ರ ಬೆಳಗ್ಗೆ 10.30 ರಿಂದ
2	e-Tender ಸಲ್ಲಿಸಲು ಕೊನೆಯ ದಿನಾಂಕ	ದಿನಾಂಕ: 25.05.2026ರ ಸಂಜೆ 05.30 ಗಂಟೆ
3	ತಾಂತ್ರಿಕ ಬಿಡ್ ತೆರೆಯುವ ದಿನಾಂಕ	ದಿನಾಂಕ:27.05.2026 ರ ಬೆಳಿಗ್ಗೆ 11.30 ಗಂಟೆ
4	ಆರ್ಥಿಕ ಬಿಡ್ ತೆರೆಯುವ ದಿನಾಂಕ	ದಿನಾಂಕ:29.05.2026 ರ ಬೆಳಿಗ್ಗೆ 11.30 ಗಂಟೆ

ಕ್ರ ಸಂ	ತಾಲ್ಲೂಕು	ಅಡುಗೆ ಕೇಂದ್ರಗಳ ಸಂಖ್ಯೆ	ಇ.ಎಂ.ಡಿ ಮೊತ್ತ (ರೂ.ಗಳಲ್ಲಿ)
1	ಮಡಿಕೇರಿ	128	9350/–
2	ವಿರಾಜಪೇಟೆ	152	14625/–
3	ಸೋಮವಾರಪೇಟೆ	174	13800/–

ಹೆಚ್ಚಿನ ವಿವರಗಳಿಗೆ www.kppp.karnataka.gov.in KPPP portal ಅಥವಾ ಶಿಕ್ಷಣಾಧಿಕಾರಿಗಳು, ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ ರವರ ಕಛೇರಿ ಕೆಲಸದ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದು.

ಸಹಿ/– ಶಿಕ್ಷಣಾಧಿಕಾರಿಗಳು, ಪಿ.ಎಂ.ಪೋಷಣ್ ಶಕ್ತಿ ನಿರ್ಮಾಣ್ (ಮ.ಉ.ಯೋ) ಕೊಡಗು ಜಿಲ್ಲಾ ಪಂಚಾಯತ್, ಮಡಿಕೇರಿ

ಕರ್ನಾಟಕ ಸರ್ಕಾರ – ಕರ್ನಾಟಕ ಅರಣ್ಯ ಇಲಾಖೆ

ಉಪ ಅರಣ್ಯ ಸಂರಕ್ಷಣಾಧಿಕಾರಿಯವರ ಕಛೇರಿ, ಶಿವಮೊಗ್ಗ ವಿಭಾಗ, ಶಿವಮೊಗ್ಗ

ಪ್ರಾದೇಶಿಕ ವಿಭಾಗ ಕಛೇರಿ ಡಿ.ಸಿ ಕಾಂಪೌಂಡ್, ಶಿವಮೊಗ್ಗ–577201
phone:08182-272210 FAX No: 08182-22565 EmailID: dcf.shivamoga@gmail.com
ಸಂಖ್ಯೆ: ಬಿ2/ಲಾಗಿಂಗ್/ಇ–ಹರಾಜು/ಆಲ್ಕೋಳ/ಸಿಆರ್–28/ ದಿನಾಂಕ: 28.04.2026

ಅರಣ್ಯ ಉತ್ಪನ್ನಗಳ ಇ–ಹರಾಜಿಗೆ ಸಂಬಂಧಪಟ್ಟ ಟೆಂಡರ್ ಪ್ರಕಟಣೆ

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಶಿವಮೊಗ್ಗ ವಿಭಾಗದ ಸರ್ಕಾರಿ ನಾಟಾ ಸಂಗ್ರಹಾಲಯ, ಆಲ್ಕೋಳ, ಶಿವಮೊಗ್ಗ ಇಲ್ಲಿ ದಾಸ್ತಾನು ಇರುವ ನಾಟಾ/ ಸೌದೆ/ ಬಿಲ್ಲೇಟ್/ ಪೋಲ್ಸ್ ಗಳನ್ನು ದಿನಾಂಕ: 30–05–2026 ರಂದು ಇ–ಹರಾಜು ಮೂಲಕ ವಿಲೇವಾರಿ ಮಾಡಲು ದಿನಾಂಕವನ್ನು ನಿಗದಿಪಡಿಸಲಾಗಿರುತ್ತದೆ. ಸದರಿ ಹರಾಜಿನಲ್ಲಿ ಈ ಕಛೇರಿಯ ಸವಿಸ್ತಾರ ಹರಾಜು ಪುಕಟಣೆ ಸಂಖ್ಯೆ: ಬಿ2/ಲಾಗಿಂಗ್/ಇ–ಹರಾಜು/ಆಲ್ಕೋಳ/ಸಿಆರ್–28/2025–26 ದಿನಾಂಕ: 28–04–2026 ರಲ್ಲಿ ತಿಳಿಸಿರುವ ಷರತ್ತಿಗೊಳಪಟ್ಟು ಹರಾಜಿನಲ್ಲಿ ಭಾಗವಹಿಸಬಹುದಾಗಿದೆ. ಇ ಹರಾಜಿಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಗಾಗಿ ಕಛೇರಿಯ ವೇಳೆಯಲ್ಲಿ ಈ ಕಛೇರಿಯಲ್ಲಿ ಸಂಪರ್ಕಿಸಬಹುದಾಗಿರುತ್ತದೆ.ಹಾಗೂ ಇ–ಹರಾಜಿನ ಕುರಿತು ವಿವರಗಳನ್ನು ಕರ್ನಾಟಕ ಸರ್ಕಾರದ ಅಧಿಕೃತ ವೆಬ್‌ಸೈಟ್ www.etimber.in www.mstcecommerce.com ಮೂಲಕ ಪಡೆದುಕೊಳ್ಳಬಹುದಾಗಿರುತ್ತದೆ.

ಇ–ಹರಾಜಿಗೆ ಇಟ್ಟಿರುವ ಅರಣ್ಯ ಉತ್ಪನ್ನಗಳ ವಿವರ

ಕ್ರ ಸಂ	ಉಗ್ರಾಣದ ಹೆಸರು	ಉತ್ಪನ್ನಗಳ ವಿವರ		ಲಾಟ್ ಸಂಖ್ಯೆ	ಅಂದಾಜು ಪ್ರಮಾಣ (ಎಂ3 ಗಳಲ್ಲಿ)	ದಿನಾಂಕ ಮತ್ತು ಸೆಷನ್ಸ್
1	ಜಿ.ಟಿ.ಡಿ ಆಲ್ಕೋಳ ಶಿವಮೊಗ್ಗ	ಅಕೇಶಿಯಾ	ನಾಟಾ	120	6819-1173.277	30.05.2026 4 ession
2		ಅಕೇಶಿಯಾ ಸ್ಪಿಂಗ್ ವೆಲ್	ನಾಟಾ	05	7=1.353	
3		ಬೀಟೆ	ನಾಟಾ	51	253=20.329	
4		ಸಾಗುವಾನಿ	ನಾಟಾ	105	835=46.873	
5		ಇತರೆ ಜಾತಿ	ನಾಟಾ	148	375=93.488	
6		ಅಕೇಶಿಯಾ	ಸೈಜಸ್	01	5=0.055	
7		ಬೀಟೆ	ಸೈಜಸ್	03	28=1.340	
8		ಸಾಗುವಾನಿ	ಸೈಜಸ್	12	85=2.764	
9		ಇತರೆ ಜಾತಿ	ಸೈಜಸ್	03	20=0.383	
10		ಅಕೇಶಿಯಾ	ಪೋಲ್ಸ್	14	278 ಸಂಖ್ಯೆ	
11		ಅಕೇಶಿಯಾ ಸ್ಪಿಂಗ್ ವೆಲ್	ಪೋಲ್ಸ್	01	03 ಸಂಖ್ಯೆ	
12		ಬೀಟೆ	ಪೋಲ್ಸ್	01	04 ಸಂಖ್ಯೆ	
13		ಸಾಗುವಾನಿ	ಪೋಲ್ಸ್	14	229 ಸಂಖ್ಯೆ	
14		ಇತರೆ ಜಾತಿ	ಪೋಲ್ಸ್	06	325ಸಂಖ್ಯೆ	
15		ಅಕೇಶಿಯಾ	ಬಿಲ್ಲೇಟ್ಸ್	03	32.506	
16		ಬೀಟೆ	ಬಿಲ್ಲೇಟ್ಸ್	03	1.848	
17		ಸಾಗುವಾನಿ	ಬಿಲ್ಲೇಟ್ಸ್	04	1.061	
18		ಎನ್.ಟಿ.ಎಫ್.ಪಿ	–	01	60 ಸಂಖ್ಯೆ	
		ಒಟ್ಟು ಲಾಟ್ ಸಂಖ್ಯೆ		495		

ಸಹಿ/– ಉಪ ಅರಣ್ಯ ಸಂರಕ್ಷಣಾಧಿಕಾರಿ, ಶಿವಮೊಗ್ಗ ವಿಭಾಗ, ಶಿವಮೊಗ್ಗ.
ವಾ.ಸಾ.ಸಂ.ಇ/ಕೆಎಸ್‌ಎಂಸಿಎ/ಶಿ/26–27/35/05/204

ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರ

ಬೆಳಗುಂಬ ರಸ್ತೆ, ತುಮಕೂರು – 572103 ಫ್ಯಾಕ್ಸ್ : 0816–2255761 ದೂರವಾಣಿ : 2272280
website: tumakuru.uda.gov.in, email: tudatmk2009@yahoo.co.in
ಕ್ರಮಾಂಕ ಟಿಯುಡಿಎ/ಸಮುದಾಯ ಭವನ/ಇ–ಹರಾಜು/01/2026–27 ದಿನಾಂಕ : 07–05–2026

ಇ–ಹರಾಜು ಪ್ರಕಟಣೆ

ಮರಳೂರು ಸರ್ವೆ ನಂಬರ್‌ನಲ್ಲಿ ನಿರ್ಮಿಸಿರುವ ಸಮುದಾಯ ಭವನದ ನಿರ್ವಹಣೆಗೆ ಇ–ಹರಾಜು ಪ್ರಕಟಣೆ

1)	ಇ–ಹರಾಜಿನ ಪ್ರಕ್ರಿಯೆಯು ಪ್ರಾರಂಭವಾಗುವ ದಿನಾಂಕ	:	ದಿನಾಂಕ : 07–05–2026
2)	ಇ–ಹರಾಜಿನಲ್ಲಿ ಪಾಲ್ಗೊಳ್ಳಲು ಪ್ರೋಸೆಸಿಂಗ್ ಶುಲ್ಕ ಮತ್ತು ಇ.ಎಂ.ಡಿ ಪಾವತಿಸುವ ಕೊನೆಯ ದಿನಾಂಕ ಹಾಗೂ ಸಮಯ	:	ದಿನಾಂಕ : 21–05–2026 ಸಾಯಂಕಾಲ : 5.00 ಗಂಟೆವರೆಗೆ
3)	ಇ–ಹರಾಜಿನಲ್ಲಿ ಬಿಡ್ ಮಾಡುವ ಸಮಯ	:	ದಿನಾಂಕ : 22–05–2026 ರ ಬೆಳಿಗ್ಗೆ 10.00 ಗಂಟೆಯಿಂದ ಸಾಯಂಕಾಲ 5.00 ಗಂಟೆಗೆ ಮುಕ್ತಾಯಗೊಳ್ಳುತ್ತದೆ. (ಡೆಲ್ಟಾ ಟೈಮ್ 0.05.00 ನಿಮಿಷ)

ತುಮಕೂರು ನಗರದ ಕುಣಿಗಲ್ ರಸ್ತೆ ಹಾಗೂ ರಿಂಗ್ ರಸ್ತೆಗೆ ಹೊಂದಿಕೊಂಡಂತೆ ಇರುವ ಪ್ರಾಧಿಕಾರದಿಂದ ರಚಿಸಿರುವ ಮರಳೂರು ಸರ್ವೆ ನಂಬರ್‌ನಲ್ಲಿ ನಿರ್ಮಿಸಲಾಗಿರುವ ಸಮುದಾಯ ಭವನವನ್ನು ಬಾಡಿಗೆ ನೀಡುವ ಬಗ್ಗೆ.

ಕ್ರ ಸಂ	ಸ್ಥಳ	ವಿಸ್ತೀರ್ಣ ಚ.ಮೀ. ಗಳಲ್ಲಿ	ಕನಿಷ್ಠ ಮಾಸಿಕ ಪ್ರೀಮಿಯಂ ರೂ. ಗಳಲ್ಲಿ	ಪಾವತಿಸ ಬೇಕಾಗಿರುವ. ಇ.ಎಂ.ಡಿ. ಮೊತ್ತ ರೂ. ಗಳಲ್ಲಿ	ಪಾವತಿಸಬೇಕಾದ ಠೇವಣಿ ಮೊಬಲಗು ರೂ. ಗಳಲ್ಲಿ
1	ಮರಳೂರು ಸಮುದಾಯ ಭವನ	ಕೆಳ ಮಹಡಿ 6804 ಚ.ಅ ನೆಲಮಹಡಿ 6410 ಚ.ಅ 1ನೇ ಮಹಡಿ 4256 ಚ.ಅ ಹಾಗೂ ಪಾರ್ಕಿಂಗ್ ಸ್ಥಳ: 13000 ಚ.ಅ	3,00,000	6,48,000	21,60,000

ವೆಬ್‌ಸೈಟ್ : kppp.karnataka.gov.in ಹಾಗೂ **website:tumakuru.uda.gov.in** ನಲ್ಲಿ ಇ–ಹರಾಜಿನ ಸಂಬಂಧ ಷರತ್ತು, ನಿಯಮ, ನಿಬಂಧನೆಗಳ ವಿವರಗಳನ್ನು ಮೇಲ್ಕಂಡ ವೈಬ್‌ಸೈಟ್‌ನಲ್ಲಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಈ ಕಛೇರಿಯ ವೇಳೆಯಲ್ಲಿ ಮಾಹಿತಿಯನ್ನು ಪಡೆಯಬಹುದಾಗಿರುತ್ತದೆ ಮತ್ತು ಇ–ಹರಾಜಿಗೆ ಸಂಬಂಧಿಸಿದಂತೆ ಯಾವುದಾದರೂ ಬದಲಾವಣೆ ಇದ್ದಲ್ಲಿ ಇ–ಪ್ರಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಮಾತ್ರ ಪ್ರಕಟಿಸಲಾಗುವುದು, ಯಾವುದೇ ಪತ್ರಿಕಾ ಪ್ರಕಟಣೆಯನ್ನು ಹೊರಡಿಸಲಾಗುವುದಿಲ್ಲ.

ಸಹಿ/– (ಶುಭ ಕಲ್ಯಾಣ್) ಭಾ.ಆ.ಸೇ., ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳು, ನಗರಾಭಿವೃದ್ಧಿ ಪ್ರಾಧಿಕಾರ, ತುಮಕೂರು
ಸಹಿ/– (ಉಮೇಶ್‌ಚಂದ್ರ ಎನ್.ಆರ್.) ಕೆ.ಎ.ಎಸ್., ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ, ತುಮಕೂರು
DIPR/TUM/RO-26/26-27/Oysters